ಸಂಪುಟ : 9 ಸಂಚಿಕೆ 229 ಪುಟ : 4 ಬೆಲೆ: 3.00 ಶನಿವಾರ ಅಕ್ಟೋಬರ್ 19 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 229 Pages : 4 Price : 3.00 Saturday October 19 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**ಕಳಸಾಪೂರದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಇಂದು**

## ‘ಶ್ರೀ ವಾಲ್ಮೀಕಿ ರತ್ನ’ ಪ್ರಶಸ್ತಿ ಪ್ರದಾನ

■ ವಿಜಯಸಾಕ್ಷಿ ಸುದ್ದಿ, ಗದಗ



ತಾಲೂಕಿನ ಕಳಸಾಪೂರ ಗ್ರಾಮದ ಶ್ರೀ ಮಹರ್ಷಿ ವಾಲ್ಮೀಕಿ ಸಮಾಜ ಸೇವಾ ಸಂಘ ಕಳಸಾಪೂರ ಇವರ ಸಂಯುಕ್ತ ಆಶ್ರಯದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿರವರ ಜಯಂತಿ ಆಚರಣೆ ಹಾಗೂ ಶ್ರೀ ವಾಲ್ಮೀಕಿ ರತ್ನ ಪ್ರಶಸ್ತಿ ಪುರಸ್ಕಾರ ಸಮಾರಂಭ ಅ. 19ರ ಸಾಯಂಕಾಲ 5 ಗಂಟೆಗೆ ಕಳಸಾಪೂರ ಗ್ರಾಮದ ಶ್ರೀ ವಾಲ್ಮೀಕಿ ಸಮುದಾಯ ಭವನದ ಆವರಣದಲ್ಲಿ ಜರುಗಲಿದೆ.

ಈ ಕಾರ್ಯಕ್ರಮದಲ್ಲಿ ಪೊಲೀಸ್ ಉಪ ಮಹಾನಿರೀಕ್ಷಕ ರವಿ ಡಿ.ಚನ್ನಣ್ಣವರ ಐ.ಪಿ.ಎಸ್ ಇವರಿಗೆ 2024ರ ‘ಶ್ರೀ ವಾಲ್ಮೀಕಿ ರತ್ನ’ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಷ. ಬ್ರ. ಶ್ರೀ ಫಕ್ಕೀರೇಶ್ವರ ಸ್ವಾಮಿಗಳು ವಹಿಸುವರು. ಉದ್ಘಾಟಕರಾಗಿ ರವಿ ಡಿ.ಚನ್ನಣ್ಣನವರ ಆಗಮಿಸುವರು.

ಅಧ್ಯಕ್ಷತೆಯನ್ನು ಶರದರಾವ್ ಚ.ಹುಯಿಲಗೋಳ ವಹಿಸುವರು. ವಿಶೇಷ ಅತಿಥಿಗಳಾಗಿ ಶ್ರೀ ವಾಲ್ಮೀಕಿ ಸಮಾಜ ಸೇವಾ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಮೈಲಾರಪ್ಪ ಬೆಳಧಡಿ, ಉಪತಹಸೀಲ್ದಾರ ಸಂಜೀವಕುಮಾರ ಶಿಂಪರ್, ಪೊಲೀಸ್ ಅಧಿಕಾರಿ ಸಂಗಮೇಶ ಶಿವಯೋಗಿ, ರಾಮಪ್ಪ ಮಹಾದೇವಪ್ಪ ಅಣ್ಣಿಗೇರಿ ಚಂದ್ರಕಾಂತ ನಾರಾಯಣ ಹುಲಕೋಟಿ, ಸಂದೇಶ ಇರಾಳ, ನಾಗರಾಜ ನಾಯಕ, ಎಂ.ಆರ್. ಪಾಟೀಲ, ಮಂಜುನಾಥ ಚಂದಪ್ಪನವರ, ಬಸಯ್ಯ ಇಟಗಿಮಠ ಪಿಡಿಓ, ಬಸವರಾಜ ಕುರಗೋಡ, ಬಸವಣ್ಣೆವ್ವ ಶಿ.ಮೇಲಗೇರಿ, ರತ್ನಾ ನಾಯ್ಕರ್ ಪಾಲ್ಗೊಳ್ಳುವರು.

ಮುಖ್ಯ ಅತಿಥಿಗಳಾಗಿ ವಾಲ್ಮೀಕಿ ಸಮಾಜದ ಹಿರಿಯರಾದ ರಾಮಪ್ಪ ಯಮನಪ್ಪ ಹಾದಿಮನಿ, ಮಲ್ಲೇಶಪ್ಪ ಶಂಕ್ರಪ್ಪ ಹಾದಿಮನಿ, ಶಿವಪುತ್ರಪ್ಪ ದುಂದೂರ, ಹನಮಪ್ಪ ಸಿದ್ದಪ್ಪ ಹಾದಿಮನಿ, ಬಸಪ್ಪ ಪೂಜಾರ, ಬಸಪ್ಪ ಮಲ್ಲೇಶಪ್ಪ ಹುಯಿಲಗೋಳ, ಸುರೇಶ ವಾಯ್. ನಾಯ್ಕರ್, ಅಮೀನಸಾಬ ದಾವಲಖಾನವರ, ಸೋಮಪ್ಪ ವಡ್ಡರ, ಗೋವಿಂದಪ್ಪ ಲಮಾಣಿ ಆಗಮಿಸುವರು.

ಪ್ರಾಚಾರ್ಯ ಎಂ.ಸಿ. ಕಟ್ಟಿಮನಿ, ಉಪನ್ಯಾಸಕ ಬಸವರಾಜ ಶಿರುಂದ ಇವರುಗಳು ಉಪನ್ಯಾಸ ನೀಡುವರು. ಕಾರ್ಯಕ್ರಮದ ಸ್ವಾಗತ ಮತ್ತು ನಿರೂಪಣೆಯನ್ನು ಎಚ್.ವಾಯ್. ನಾಯ್ಕರ ನೆರವೇರಿಸುವರು ಎಂದು ಪ್ರಕಟಣೆ ತಿಳಿಸಿದೆ.

## ನಮಗೆ ಸೂಕ್ತ ರಕ್ಷಣೆ ಬೇಕು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಸ ಆರಿಸಿ ಜೀವನ ನಡೆಸುವ ಚಿಕ್ಕ ಸಮಾಜದ ನಮಗೆ ಆಗಿರುವ ಅನ್ಯಾಯಕ್ಕೆ ನ್ಯಾಯ ಕೇಳಲು ಅ.19ರಂದು ಲಕ್ಷ್ಮೇಶ್ವರ ಬಂದ್ ಕರೆ ನೀಡಿದ್ದು, ಇದಕ್ಕೆ ಸಂಘಟನೆಯವರು, ವ್ಯಾಪಾರಸ್ಥರು ಹಾಗೂ ಹಿರಿಯರು ಬೆಂಬಲ ನೀಡಬೇಕು ಎಂದು ಗೋಸಾವಿ ಸಮಾಜದ ಮುಖಂಡ ಬಾಳಪ್ಪ ಗೋಸಾವಿ ಮನವಿ ಮಾಡಿದರು.

ಅವರು ಪಟ್ಟಣದ ಪತ್ರಿಕಾ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿ, ವಿಜಯದಶಮಿ ಆಚರಣೆಯನ್ನು ಅನೇಕ ವರ್ಷಗಳಿಂದ ಮಾಡುತ್ತಾ ಬಂದಿದ್ದೇವೆ. ಅಂದು ಮುಸ್ಲಿಂ ಯುವಕರಿಂದ ನಮ್ಮ ಸಮಾಜದ ಯುವಕರಿಗೆ ಹಲ್ಲೆ ಆಗಿತ್ತು. ದೂರು ನೀಡಲು ಪೊಲೀಸ್ ಠಾಣೆಗೆ ಹೋದಾಗ ಪಿಎಸ್ಐ ಈರಪ್ಪ ರಿತ್ತಿ ಅವರು ನಮ್ಮ ಸಮಾಜದ ಯುವಕರು ಹಾಗೂ ಹೆಣ್ಣು ಮಕ್ಕಳ ಮೇಲೆ ಲಾಠಿ ಪ್ರಯೋಗ ಮಾಡಿದ್ದಾರೆ. ಗಣೇಶ ಹಬ್ಬದ ಸಂದರ್ಭದಲ್ಲೂ ವಿನಾಕಾರಣ ನಮ್ಮ ಯುವಕರನ್ನು ಹೊಡೆದಿದ್ದಾರೆ. ನಮ್ಮ ಜನಾಂಗವನ್ನು ಗುರಿಯಾಗಿಸಿಕೊಂಡು ಪದೇ ಪದೇ ಹಲ್ಲೆ ನಡೆಸುತ್ತಿದ್ದಾರೆ. ನಿತ್ಯ ಪಟ್ಟಣದಲ್ಲಿ ಕಸ ಆರಿಸಿ ಜೀವ ನಡೆಸುವ ನಮಗೆ ಪಿಎಸ್ಐ ಅವರಿಂದ ಜೀವ ಬೆದರಿಕೆ ಇದ್ದು, ನಮಗೆ ಸೂಕ್ತ ರಕ್ಷಣೆ ಬೇಕು ಮತ್ತು ಕೂಡಲೇ ಅವರನ್ನು ಬೇರೆಡೆ ವರ್ಗಾವಣೆ ಮಾಡಬೇಕು. ಪಿಎಸ್ಐ ಅವರು ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿಯೇ ಇದ್ದರೆ ನಮ್ಮ ಸಮಾಜದ ಎಲ್ಲರೂ ಬೆಂಕಿ ಹಚ್ಚಿಕೊಂಡು ಸಾಯುತ್ತೇವೆ ಎಂದರು.

ಈ ವೇಳೆ ಗೋವಿಂದ ಗೋಸಾವಿ, ಸುರೇಶ ಗೋಸಾವಿ, ರಾಮು ಗೋಸಾವಿ, ರಾಜು ಗೋಸಾವಿ ಇದ್ದರು.

**ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ ಡಿಸಿ, ಸಿಇಓ**

# ಪ್ರವಾಹ ಪರಿಸ್ಥಿತಿ ಸಮರ್ಥವಾಗಿ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಶುಕ್ರವಾರ ಜಿಲ್ಲೆಯ ನರಗುಂದ ಹಾಗೂ ರೋಣ ತಾಲೂಕಿನ ಬೆಣ್ಣೆ ಹಳ್ಳ ಮತ್ತು ಮಲಪ್ರಭಾ ನದಿಯ ಪ್ರವಾಹ ಪೀಡಿತ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಅಧಿಕ ಮಳೆಯಿಂದಾಗಿ ಬೆಣ್ಣೆಹಳ್ಳದ ನೀರಿನ ಹರಿವಿನ ಪ್ರಮಾಣ ಒಮ್ಮೆಲೇ ಹೆಚ್ಚಾಗಿ ಅಗಾಧ ಪ್ರಮಾಣದ ಬೆಳೆ, ಆಸ್ತಿ ಹಾನಿ ಮಾಡಲಿದೆ. ಅಂತೆಯೇ, ಮಲಪ್ರಭಾ ನದಿ ಪ್ರವಾಹದಿಂದಲೂ ಈ ಭಾಗದ ಗ್ರಾಮಗಳಿಗೆ ಪ್ರವಾಹ ಪರಿಸ್ಥಿತಿ ಎದುರಾಗುವ ಸಂಭವವಿದೆ. ತಾಲೂಕಾ ಆಡಳಿತಗಳು ಪ್ರವಾಹ ಪರಿಸ್ಥಿತಿಯನ್ನು ಅತ್ಯಂತ ಶಿಸ್ತುಬದ್ಧವಾಗಿ ಯೋಜಿಸಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚನೆ ನೀಡಿದರು.

ಪ್ರವಾಹದ ಮುಂಜಾಗ್ರತಾ ಕ್ರಮವಾಗಿ ಪ್ರವಾಹ ಪೀಡಿತವಾಗುವ ಗ್ರಾಮಗಳಲ್ಲಿ ವಾಸಿಸುವ ಸಾರ್ವಜನಿಕರಿಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಲು ಸೂಚಿಸಬೇಕು. ಅಲ್ಲದೇ ಜನ-ಜಾನುವಾರು ಹಾನಿಯಾಗದಂತೆ ತಡೆಯಲು



ಪ್ರಥಮಾದ್ಯತೆ ನೀಡಬೇಕು ಎಂದು ತಹಸೀಲ್ದಾರರಿಗೆ ಪ್ರವಾಹ ಪೀಡಿತ ಪ್ರದೇಶ ವೀಕ್ಷಣಾ ಸಮಯದಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ತಿಳಿಸಿದರು.

ಸಾರ್ವಜನಿಕರು ಶಿಥಿಲಾವಸ್ಥೆಯಲ್ಲಿರುವ ಮನೆಗಳಲ್ಲಿ ವಾಸ ಮಾಡದಿರುವಂತೆ ತಿಳಿಹೇಳಬೇಕು. ಅಲ್ಲದೇ ವಿದ್ಯುತ್ ಕಂಬಗಳ ಹತ್ತಿರ ಹಾಗೂ ನದಿ ಪಾತ್ರದ ಹತ್ತಿರ ಜನ-ಜಾನುವಾರು ಸುಳಿಯದಂತೆ ಮುನ್ನೆಚ್ಚರಿಕೆಗಳನ್ನು ಕೈಗೊಳ್ಳಲು ಜಾಗೃತಿ ಮೂಡಿಸಬೇಕು. ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಸ್ಥಳೀಯ ಮಟ್ಟದ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿದ್ದು ತಾಲೂಕು ಆಡಳಿತ ಹಾಗೂ ಜಿಲ್ಲಾಡಳಿತದೊಂದಿಗೆ ನಿರಂತರ ಸಮನ್ವಯ ಸಾಧಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಹೇಳಿದರು.

ಈ ಸಂದರ್ಭದಲ್ಲಿ ನರಗುಂದ ತಹಸೀಲ್ದಾರ ಶ್ರೀಶೈಲ ತಳವಾರ ಸೇರಿದಂತೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ಜಾನಮಟ್ಟಿ, ತೋಟಗಾರಿಕಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಬಿ.ಎಂ. ಬ್ಯಾಗಿ, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಸಾರ್ವಜನಿಕರು ಹಾಜರಿದ್ದರು.



**ಮಲಪ್ರಭಾ ನದಿಯ ನೀರಿನ ಮಟ್ಟ**

ಮಲಪ್ರಭಾ ನದಿ (ರೇಣುಕಾ ಸಾಗರ) ಜಲಾಶಯದ ನೀರಿನ ಸಂಗ್ರಹಣಾ ಸಾಮರ್ಥ್ಯ-37.731 ಟಿಎಂಸಿ ಇದ್ದು, ಶುಕ್ರವಾರ ಬೆಳಿಗ್ಗೆ 37.731 ಟಿಎಂಸಿ ತಲುಪಿದೆ. ನದಿಯ ಒಳಹರಿವು 8,694 ಕ್ಯೂಸೆಕ್ ಇದ್ದು ಹೊರಹರಿವು 8,694 ಕ್ಯೂಸೆಕ್ ಇದೆ.

**ಬೆಳೆ ಹಾನಿ ಪ್ರದೇಶಕ್ಕೆ ಭೇಟಿ**

ನರಗುಂದ ಹಾಗೂ ರೋಣ ತಾಲೂಕುಗಳ ಪ್ರವಾಹ ಹಾಗೂ ಅತಿವೃಷ್ಟಿಯಿಂದ ಹಾನಿಗೊಳಗಾದ ಕೃಷಿ ಹಾಗೂ ತೋಟಗಾರಿಕಾ ಬೆಳೆಗಳನ್ನು ವೀಕ್ಷಿಸಿದ ಜಿಲ್ಲಾಧಿಕಾರಿಗಳು, ಕೃಷಿ ಹಾಗೂ ತೋಟಗಾರಿಕಾ ಇಲಾಖೆ ಅಧಿಕಾರಿಗಳು ಸರ್ಕಾರದ ಮಾರ್ಗಸೂಚಿಗಳನ್ವಯ ಬೆಳೆ ಹಾನಿಗೊಳಗಾದ ಅರ್ಹ ರೈತರಿಗೆ ನಿಯಮಾನುಸಾರ ಪರಿಹಾರ ಒದಗಿಸಲು ತಕ್ಷಣ ಕಾರ್ಯಪ್ರವೃತ್ತರಾಗಬೇಕು ಎಂದರು. ನರಗುಂದ ಹಾಗೂ ರೋಣ ತಾಲೂಕಿನ ಬೆಳೆಹಾನಿ ಪ್ರದೇಶಗಳಾದ ಹದಲಿ, ಮೆಣಸಗಿ, ಯಾವಗಲ್, ಬನಹಟ್ಟಿ, ಸುರಕೋಡ, ಹೊಳೆಆಲೂರು ಸೇರಿದಂತೆ ಇನ್ನಿತರೆ ಪ್ರದೇಶಕ್ಕೆ ಭೇಟಿ ನೀಡಿ ಸ್ಥಳೀಯ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

**ಅ.19ರಂದು ಶ್ರೀರಾಮ ಸೇನೆಯಿಂದ ಬಂದ್‌ಗೆ ಕರೆ ಹಿನ್ನೆಲೆ**

# ಲಕ್ಷ್ಮೇಶ್ವರದಲ್ಲಿ ಪ್ರತಿಬಂಧಕಾಜ್ಞೆ: ಪೊಲೀಸರ ಸರ್ಪಗಾವಲು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ತಾಲೂಕಾ ದಂಡಾಧಿಕಾರಿಗಳ ಅದೇಶನ್ವಯ ಅ.18ರ ರಾತ್ರಿ 10 ಗಂಟೆಯಿಂದ ಅ.20 ಬೆಳಿಗ್ಗೆ 6 ಗಂಟೆಯವರೆಗೆ ಭಾರತೀಯ ನಾಗರಿಕ ಸುರಕ್ಷತಾ ಸಂಹಿತೆ 2023ರ ಕಲಂ.163(144) ಅಡಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ತಿಳಿಸಿದ್ದಾರೆ.



ಈ ಕುರಿತು ಶುಕ್ರವಾರ ಪೊಲೀಸ್ ಠಾಣೆಯಲ್ಲಿ ಮಾಧ್ಯಮ ಗೊಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಅ.12ರಂದು ಗೋಸಾವಿ ಸಮಾಜದವರು ದಸರಾ ಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ದುರ್ಗಾದೇವಿ ಮೂರ್ತಿ ವಿಸರ್ಜನೆ ಮೆರವಣಿಗೆಯ ದಿನ ಗೋಸಾವಿ ಮತ್ತು ಮುಸ್ಲಿಂ ಸಮಾಜದ ಕೆಲ ಯುವಕರ ನಡುವೆ ಗಲಾಟೆಯಾಗಿದೆ. ಮರುದಿನ ಬೆಳಿಗ್ಗೆ ಗೋಸಾವಿ ಸಮಾಜ ಮತ್ತು ಶ್ರೀರಾಮ ಸೇನೆ ಸಂಘಟನೆಯವರು ಠಾಣೆಗೆ ಗುಂಪಾಗಿ ಬಂದು ವಿನಾಕಾರಣ ತಂಟೆ-ತಕರಾರು ಮಾಡಿದ ಮುಸ್ಲಿಂ ಯುವಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಈ ವೇಳೆ ಪಿಎಸ್ಐ ಗುಂಪು ಚದುರಿಸಲು ಲಾಠಿ ಪ್ರಯೋಗಿಸಿದ್ದಾರೆಂದು ಆರೋಪಿಸಿ ಪಟ್ಟಣದಲ್ಲಿ ರಾಜ್ಯ ಹೆದ್ದಾರಿ ತಡೆದು ಪಿಎಸ್ಐ ವಿರುದ್ಧ ದಿಢೀರ್ ಪ್ರತಿಭಟನೆ ನಡೆಸಿದ್ದಾರೆ. ನಂತರ ಶ್ರೀರಾಮಸೇನೆ ಮುಖಂಡ ರಾಜು ಖಾನಪ್ಪನವರ ನೇತೃತ್ವದಲ್ಲಿ ಗದುಗಿಗೆ ತೆರಳಿ ಮುಸ್ಲಿಂ ಯುವಕರು ಮತ್ತು ಪಿಎಸ್ಐ ವಿರುದ್ಧ ಕ್ರಮ ಕೈಗೊಳ್ಳಬೇಕು, ಇಲ್ಲದಿದ್ದರೆ ಅ.19ರಂದು ಲಕ್ಷ್ಮೇಶ್ವರ ಬಂದ್ ಮಾಡುತ್ತೇವೆ ಎಂದು ಡಿವೈಎಸ್‌ಪಿಗೆ ಮನವಿ ಸಲ್ಲಿಸಿದ್ದಾರೆ ಮತ್ತು ಪತ್ರಿಕಾಗೋಷ್ಠಿಯ ಮೂಲಕ ತಿಳಿಸಿದ್ದಾರೆ.

ಇದಕ್ಕೆ ಪ್ರತಿಯಾಗಿ ಕೆಲವು ಪ್ರಗತಿಪರ, ಕನ್ನಡಪರ ಸಂಘಟನೆಯವರು, ಮುಖಂಡರು ಲಕ್ಷ್ಮೇಶ್ವರ ಬಂದ್‌ಗೆ ಅವಕಾಶ ಕೊಡಬಾರದು, ಪ್ರತಿಭಟನೆಗೆ ಅವಕಾಶ ಕೊಟ್ಟರೆ ಇದಕ್ಕೆ ಪ್ರತಿಯಾಗಿ ಪ್ರತಿಭಟನೆ ಮಾಡುವ ಮತ್ತು ತಡೆಯುವ ಕಾರ್ಯ ಮಾಡುತ್ತೇವೆ ಎಂದು ಪತ್ರಿಕಾಗೋಷ್ಠಿ ಮತ್ತು ಮನವಿ ಮೂಲಕ ಎಚ್ಚರಿಸಿದ್ದಾರೆ. ಎಲ್ಲವನ್ನೂ ಸೂಕ್ಷ್ಮವಾಗಿ ಪರಿಶೀಲಿಸಿ ಹೋರಾಟ, ಬಂದ್, ಪ್ರತಿಭಟನೆ ಮಾಡದಂತೆ ಸಂಘಟನೆ, ಮುಖಂಡರೊಂದಿಗೆ ಚರ್ಚಿಸಿ ಮನವಿ ಮಾಡಿಕೊಳ್ಳಲಾಗಿದೆ. ಆದಾಗ್ಯೂ ಸಂಘಟನೆಯವರು ಕೇಳದೇ ಶನಿವಾರ ಬಂದ್ ಕರೆಕೊಟ್ಟಿದ್ದಾರೆ.

▸▸ 4ನೇ ಪುಟಕ್ಕೆ

ಪಿಎಸ್ಐ ಈರಪ್ಪ ರಿತ್ತಿ ಅವರ ಮೇಲೆ ದೂರು ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಸೈಬರ್ ಕ್ರೈಂ ಡಿವೈಎಸ್‌ಪಿ ಮಹಾಂತೇಶ ಸಜ್ಜನ ಅವರ ನೇತೃತ್ವದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಿ ತನಿಖೆ ಕೈಗೊಂಡಿದೆ. ಇದನ್ನು ಹೊರತುಪಡಿಸಿ ಬೇರೆ ಏನಾದರೂ ವಿಷಯಗಳು ಸಾರ್ವಜನಿಕರಿಂದ ಬಂದರೂ ಅದನ್ನು ಪರಿಗಣಿಸಲಾಗುವದು ಎಂದು ತಿಳಿಸಿದರು.

## ಬಂದ್ ಹಿನ್ನೆಲೆ: ಪೊಲೀಸ್ ಪಥಸಂಚಲನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಶನಿವಾರ ಲಕ್ಷ್ಮೇಶ್ವರ ಬಂದ್‌ಗೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಕಲಂ 163ರ ಅಡಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದ್ದು, ಶಾಂತಿ-ಸುವ್ಯವಸ್ಥೆ ಕಾಪಾಡುವ ಮತ್ತು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸುವ ನಿಟ್ಟಿನಲ್ಲಿ ಶುಕ್ರವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ನೇತೃತ್ವದಲ್ಲಿ ಪಟ್ಟಣದ ಪ್ರಮುಖ ಮಾರ್ಗಗಳಲ್ಲಿ ಪೊಲೀಸ್ ಪಡೆಯಿಂದ ಪಥಸಂಚಲನ ನಡೆಸಲಾಯಿತು.




ಪಟ್ಟಣದಲ್ಲಿ ಯಾವುದೇ ರೀತಿಯ ಬಂದ್, ಪ್ರತಿಭಟನೆ ಹಾಗೂ ಅಹಿತಕರ ಘಟನೆ ನಡೆಯದಂತೆ ನಿಗಾವಹಿಸಲು ಎಸ್‌ಪಿ ನೇತೃತ್ವದಲ್ಲಿ ಮೂವರು ಡಿವೈಎಸ್‌ಪಿ, 10 ಸಿಪಿಐ, 25ಪಿಎಸ್ಐ, ಕೆಎಸ್‌ಆರ್‌ಪಿ ತುಕಡಿ, ಡಿಆರ್, ಗೃಹ ರಕ್ಷಕರು ಸೇರಿ 300ಕ್ಕೂ ಹೆಚ್ಚು ಸಿಬ್ಬಂದಿ ನಿಯೋಜಿಸಲಾಗಿದೆ.

**ಜಿಲ್ಲಾ ವಾಲ್ಮೀಕಿ ಸೇವಾ ಸಮಿತಿಯ ಯುವ ಘಟಕದ ಅಧ್ಯಕ್ಷ ಅನಿಲಕುಮಾರ ಸಿದ್ದಮ್ಮನಹಳ್ಳಿ ಮಾಹಿತಿ**

# ವಾಲ್ಮೀಕಿ ಜಯಂತ್ಯುತ್ಸವದ ಅಂಗವಾಗಿ ಮೆರವಣಿಗೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

2024ರ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವವನ್ನು ಈಗಾಗಲೇ ಶುಕ್ರವಾರ ಜಿಲ್ಲಾಡಳಿತ ಭವನದಲ್ಲಿ ಆಚರಿಸಲಾಗಿದೆ. ಇದಕ್ಕೂ ಮುನ್ನ ನಗರದ ಪ್ರಮುಖ ಬೀದಿಗಳಲ್ಲಿ ಬೈಕ್ ರ‍್ಯಾಲಿಯನ್ನು ಕೂಡ ಆಯೋಜನೆ ಮಾಡಲಾಗಿತ್ತು. ಈ ಕಾರ್ಯಕ್ರಮಕ್ಕೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮಹೇಶ ಪೋತದಾರ ಹಾಗೂ ನಗರಸಭೆಯ ಪರಿಸರ ಅಭಿಯಂತರರಾದ ಬಂಡಿವಡ್ಡರ ಚಾಲನೆ ನೀಡಿದ್ದರು. ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವದ ಅಂಗವಾಗಿ ಅ.20ರಂದು ಅದ್ದೂರಿ ಮೆರವಣಿಗೆಯನ್ನು ಆಯೋಜನೆ ಮಾಡಲಾಗಿದೆ ಎಂದು ಗದಗ ಜಿಲ್ಲಾ ವಾಲ್ಮೀಕಿ ಸೇವಾ ಸಮಿತಿಯ ಯುವ ಘಟಕದ ಅಧ್ಯಕ್ಷ ಅನಿಲಕುಮಾರ ಸಿದ್ದಮ್ಮನಹಳ್ಳಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಯಚೂರು ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ಎಸ್.ಟಿ ಹಾಸ್ಟೆಲ್‌ಗಳಿಗೆ ಶ್ರೀ ಮಹರ್ಷಿ ವಾಲ್ಮೀಕಿಯ ಹೆಸರು ಇಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈಗಾಗಲೇ ಘೋಷಿಸಿದ್ದಾರೆ. ಗದಗ ಜಿಲ್ಲಾ ವಾಲ್ಮೀಕಿ ಸಮಾಜದ ಪರವಾಗಿ ಮುಖ್ಯಮಂತ್ರಿಗಳಿಗೆ ಅಭಿನಂದನೆಗಳನ್ನು ತಿಳಿಸಿದರು.

ಅಕ್ಟೋಬರ್ 20ರಂದು ನಡೆಯುವ ಅದ್ದೂರಿ ಮೆರವಣಿಗೆಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಕೆ. ಪಾಟೀಲ್, ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಚಾಲನೆ




ನೀಡಲಿದ್ದಾರೆ. ಕಾರ್ಯಕ್ರಮಕ್ಕೆ ಗದಗ ಜಿಲ್ಲೆಯಾದ್ಯಂತ ಸುಮಾರು 2-3ಸಾವಿರ ಜನರು ಆಗಮಿಸುವ ನಿರೀಕ್ಷೆ ಇದೆ ಎಂದರು.

ಶ್ರೀ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಮೆರವಣಿಗೆಯು ನಗರದ ವಾಲ್ಮೀಕಿ ವೃತ್ತದಿಂದ ಆರಂಭಗೊಂಡು, ಗಂಗಾಪುರ ಪೇಟೆಯ ಶ್ರೀ ದುರ್ಗಾದೇವಿ ದೇವಸ್ಥಾನದ ಆವರಣದಲ್ಲಿ ಸಂಪನ್ನಗೊಳ್ಳಲಿದೆ. ಮೆರವಣಿಗೆ ಕಾರ್ಯಕ್ರಮಕ್ಕೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಂದ ಎರಡು ಕಲಾತಂಡಗಳು ಆಗಮಿಸಲಿವೆ.

ವೇದಿಕೆ ಕಾರ್ಯಕ್ರಮದ ಉದ್ಘಾಟನೆಯನ್ನು ಸಚಿವ ಡಾ. ಎಚ್.ಕೆ. ಪಾಟೀಲ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ರಾಜ್ಯಾಧ್ಯಕ್ಷ ಡಾ. ಟಿ.ಆರ್. ತುಳಸಿರಾಮ, ವಾಲ್ಮೀಕಿ ನಾಯಕ ಸೇವಾ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಮೈ.ಬೆಳದಡಿ ವಹಿಸಿಕೊಳ್ಳಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕ ಸಿ.ಸಿ. ಪಾಟೀಲ, ವಿ.ಪ ಸದಸ್ಯ ಎಸ್.ವಿ. ಸಂಕನೂರ ವಹಿಸಿಕೋಳ್ಳಲಿದ್ದಾರೆ ಎಂದು ತಿಳಿಸಿದರು.

ಗದಗ ಉಪ ತಹಸೀಲ್ದಾರ ಡಿ.ಟಿ. ವಾಲ್ಮೀಕಿ, ಪತ್ರಿಕಾ ಸಂಪಾದಕ ಜಗದೀಶ ಪೂಜಾರ, ಪ್ರಮುಖರಾದ ವೀರೇಶ ವಾಲ್ಮೀಕಿ, ನಾಗರಾಜ ತಳವಾರ ಲಕ್ಷ್ಮೀ ಅನಿಲಕುಮಾರ ಸಿದ್ದಮ್ಮನಹಳ್ಳಿ, ಎಸ್. ಎನ್. ಬಳ್ಳಾರಿ ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ವಾಲ್ಮೀಕಿ ಸೇವಾ ಸಮಾತಿ ಅಧ್ಯಕ್ಷ ಬಸವರಾಜ ಬೆಳದಡಿ, ಶ್ರೀಕಾಂತ ಪೂಜಾರ, ಗೋವಿಂದರಾಜ ಪನ್ನೂರ, ಅರುಣಕುಮಾರ ಬೆಳದಡಿ, ವಸಂತ ವಾಲ್ಮೀಕಿ, ಶಿವಾನಂದ ತಳವಾರ, ರಮೇಶ್ ರೊಟ್ಟಿ, ವಿಜಯ ಕುರಗೋಡ ಉಪಸ್ಥಿತರಿದ್ದರು.

ಅತಿಥಿಗಳಾಗಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಎಸ್‌ಪಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ, ಅಬಕಾರಿ ಉಪ ಆಯುಕ್ತೆ ಲಕ್ಷ್ಮೀ ಎಮ್.ನಾಯಕ ಕೆ.ಎ.ಎಸ್., ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಪಿ.ಎಸ್.ಐ. ಶಂಕುಂತಲಾ ನಾಯಕ, ಕೆ.ಪಿ.ಸಿ.ಸಿ. ಮಾಜಿ ಉಪಾಧ್ಯಕ್ಷ ರಾಮಣ್ಣ ಪಲದೊಡ್ಡಿ, ಗದಗ ಜಿಲ್ಲೆ ಪರಿಶಿಷ್ಠ ಪಂಗಡ ನೌಕರ ಸಂಘದ ಅಧ್ಯಕ್ಷ ದೇವೇಂದ್ರಪ್ಪ ಎಸ್. ತಳವಾರ, ಕೆ.ಪಿ.ಸಿ.ಸಿ. ಪ್ರಧಾನ ಕಾರ್ಯದರ್ಶಿ ಟಿ. ಈಶ್ವರ ವಹಿಸಿಕೊಳ್ಳಲಿದ್ದಾರೆ ಎಂದು ಅನಿಲಕುಮಾರ ಸಿದ್ದಮ್ಮನಹಳ್ಳಿ ತಿಳಿಸಿದರು.

## ಸಂಪಾದಕೀಯ

# ಜಾತಿ ಜನಗಣತಿ ಉರುಳು?

ಮುಖ್ಯಮಂತ್ರಿ ಸಿದ್ದರಾಮಯ್ಯ ಒಂದಡೆ ಮುಡಾ ಹಗರಣದಲ್ಲಿ ಸಿಲುಕಿ ಒದ್ದಾಡುತ್ತಿದ್ದರೆ, ಮತ್ತೊಂದಡೆ ಜಾತಿ ಜನಗಣತಿ ವರದಿ ಮಂಡನೆ ವಿಷಯ ಕುರಿತು ರಾಜ್ಯಾದ್ಯಂತ ಪರ ವಿರೋಧ ಚರ್ಚೆಗಳು ನಡೆಯುತ್ತದೆ.

ಕಾಂತರಾಜು ಆಯೋಗದ ವರದಿಯನ್ನ ಯಾವುದೇ ಕಾರಣಕ್ಕೂ ಮಂಡನೆ ಮಾಡುವುದು ಬೇಡ ಎಂದು ಲಿಂಗಾಯತ ಹಾಗೂ ಒಕ್ಕಲಿಗ ಸಮುದಾಯ ಸೇರಿದಂತೆ ಅನೇಕ ಪ್ರಬಲ ಸಮುದಾಯಗಳ ಜನ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಈ ಸಮುದಾಯಕ್ಕೆ ಸೇರಿದ ಶಾಸಕರು ಮತ್ತು ಸಚಿವರಿಂದಲೂ ಸಹ ಸಿದ್ದರಾಮಯ್ಯ ಮೇಲೆ ಒತ್ತಡ ತರುವ ಪ್ರಯತ್ನಗಳನ್ನ ಮಾಡಿದ್ದಾರೆ.

ಅದರಲ್ಲೂ ವೀರಶೈವ ಮಹಾಸಭಾದ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ, ಸರಕಾರಕ್ಕೆ ಸಡ್ಡು ಹೊಡೆದಿದ್ದಾರೆ. ಸಿದ್ದರಾಮಯ್ಯ ವಿರುದ್ಧವೇ ಬಹಿರಂಗ ಅಸಮಾಧಾನವನ್ನು ಹೊರಹಾಕಿದ್ದಾರೆ. ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯದ ಶಾಸಕರು, ಸಚಿವರ ಒತ್ತಡ ಹೆಚ್ಚಾದ ಬೆನ್ನಲ್ಲೇ ಸಿದ್ದರಾಮಯ್ಯ ಆಯಾ ಸಮುದಾಯದ ಜನಪ್ರತಿನಿಧಿಗಳ ಸಭೆಯನ್ನು ಕರೆದಿದ್ದಾರೆ.

ಮತ್ತೊಂದೆಡೆ ಕಾಂತರಾಜು ಆಯೋಗದ ವರದಿಯನ್ನು ಬಹಿರಂಗಗೊಳಿಸದಿದ್ದರೆ ರಾಜ್ಯಾದ್ಯಂತ ಬೀದಿಗಿಳಿದು ಹೋರಾಟ ನಡೆಸುವ ಎಚ್ಚರಿಕೆಯನ್ನು ಶೋಷಿತ ಸಮುದಾಯಗಳ ಮುಖಂಡರು ಮಾಡಿದ್ದಾರೆ. ಅಹಿಂದ ಹೆಸರಿನಲ್ಲಿ ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ, ಒಂದೆಡೆ ಹಿಂದುಳಿದ ಸಮುದಾಯಗಳ ಒತ್ತಡ, ಪ್ರಬಲ ಸಮುದಾಯಗಳ ಬೆದರಿಕೆ ತಂತ್ರಕ್ಕೆ ಪ್ರತಿತಂತ್ರ ರೂಪಿಸುವಲ್ಲಿ ನಿರತರಾಗಿದ್ದಾರೆ.

ಸದ್ಯ ಮೂರು ಕ್ಷೇತ್ರಗಳ ಉಪಚುನಾವಣೆ ಕಾರಣಕ್ಕಾಗಿ ಸಚಿವ ಸಂಪುಟದ ಸಭೆ ಒಂದು ವಾರಗಳ ಕಾಲ ಮುಂದೂಡಿಕೆಯಾಗಿದೆ. ಆ ಅವಧಿಯಲ್ಲಿ ಕಾಂತರಾಜು ಆಯೋಗದ ವರದಿಯನ್ನ ಏನು ಮಾಡಬೇಕು ಎನ್ನುವ ಕುರಿತು ಸಿದ್ದರಾಮಯ್ಯ ಸ್ಪಷ್ಟ ನಿಲುವು ತೆಗೆದುಕೊಳ್ಳುವ ಸಾಧ್ಯತೆಗಳಿವೆ. ಕಾಂತರಾಜು ಆಯೋಗದ ವರದಿ ಜಾರಿ ವಿಷಯದಲ್ಲಿ ಸಿದ್ದರಾಮಯ್ಯ ಉದಾಸೀನ ಮಾಡಿದಲ್ಲಿ, ಭವಿಷ್ಯದಲ್ಲಿ ಕಾಂಗ್ರೆಸ್ ಗೆ ಉರುಳಾಗುವ ಸಾಧ್ಯತೆಗಳು ಹೆಚ್ಚು.

# ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ ಅರೆ ಅಲೆಮಾರಿ ಪ್ರವರ್ಗ-1, ವಿದ್ಯಾರ್ಥಿಗಳಿಂದ ಅರ್ಹ ಪಿಯುಸಿ ಸಮಾನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್ ಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಶುಲ್ಕ ವಿನಾಯತಿ, ವಿದ್ಯಾಸಿರಿ- ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನವನ್ನು ಅಕ್ಟೋಬರ್ 31 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ , ಗದಗ ದೂರವಾಣಿ ಸಂಖ್ಯೆ : 08372-237414 ಸಂಪರ್ಕಿಸಬಹುದಾಗಿದೆ.

# ವಿದ್ಯುತ್ ಅದಾಲತ್ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಹರ/ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿನ 3ನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗದಗ ಶಹರ/ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿದೆ.

ಈ ಪ್ರಯುಕ್ತ ಅ.19ರಂದು ಬೆಳಿಗ್ಗೆ 11 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲಾಗುವುದು. ಆದ್ದರಿಂದ ಸಾರ್ವಜನಿಕರು ತಮ್ಮ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಕೋರಲಾಗಿದೆ.

# ಶಾಲಾ-ಕಾಲೇಜುಗಳ ಆಡಳಿತ ಮಂಡಳಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಖಾಸಗಿ, ಅನುದಾನಿತ ಶಾಲಾ-ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದು, ವಿದ್ಯಾರ್ಥಿಗಳ ದಾಖಲಾತಿ ಕೊರತೆ, ಶಿಕ್ಷಕರಿಲ್ಲದ ಪ್ರಯುಕ್ತ ಎಸ್‌ಎಸ್‌ಎಲ್‌ಸಿ ಫಲಿತಾಂಶ ಗಣನೀಯವಾಗಿ ಕಡಿಮೆಯಾಗುತ್ತಿರುವುದು, ಮಾನ್ಯತೆ ನವೀಕರಣದ ಸಮಸ್ಯೆ ಇತ್ಯಾದಿ ಆಡಳಿತಾತ್ಮಕ ಸಮಸ್ಯೆಗಳನ್ನು ಅನುದಾನಿತ ಶಾಲಾ/ಕಾಲೇಜುಗಳ ಆಡಳಿತ ಮಂಡಳಿ ಎದುರಿಸುತ್ತಿದ್ದು, ಶಾಲಾ/ಕಾಲೇಜುಗಳ ನಿರ್ವಹಣೆ ವರ್ಷದಿಂದ/ವರ್ಷಕ್ಕೆ ಕಗ್ಗಂಟಾಗಿ ಪರಿಣಮಿಸುತ್ತಿದೆ. ಈ ಎಲ್ಲಾ ವಿಚಾರಗಳ ಬಗ್ಗೆ ಚರ್ಚಿಸಿ ಸೂಕ್ತ ನಿರ್ಣಯ ಕೈಗೊಳ್ಳಲು ಅ.19ರಂದು ಮಧ್ಯಾಹ್ನ 3 ಗಂಟೆಗೆ ಮಾಜಿ ಸಚಿವ ಎಸ್.ಎಸ್. ಪಾಟೀಲರ ನೇತೃತ್ವದಲ್ಲಿ ಸಭೆಯನ್ನು ಆಯೋಜಿಸಲಾಗಿದೆ.

ಈ ಸಭೆಯಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ ಉಪಸ್ಥಿತರಿರುವರು. ಅನುದಾನಿತ ಶಾಲಾ/ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಸರಕಾರದ ಅನುಮತಿ ಇಲ್ಲದೆ ನೇರ ನೇಮಕಾತಿ ಮಾಡಿಕೊಳ್ಳುವಂತೆ ಕರ್ನಾಟಕ ಉಚ್ಚ ನ್ಯಾಯಾಲಯದಿಂದ ಆದೇಶ ಪಡೆದಿರುವ ಕರ್ನಾಟಕ ರಾಜ್ಯ ಅನುದಾನಿತ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ತುಮಕೂರು ಘಟಕದ ಮುಖ್ಯಸ್ಥರನ್ನು ಮತ್ತು ಹಾವೇರಿ ಜಿಲ್ಲೆಯ ಖಾಸಗಿ ಅನುದಾನಿತ ಶಾಲಾ/ಕಾಲೇಜುಗಳ ಆಡಳಿತ ಮಂಡಳಿಯ ಜಿಲ್ಲಾ ಮುಖ್ಯಸ್ಥರನ್ನು ಸಹ ಸಭೆಗೆ ಆಹ್ವಾನಿಸಲಾಗಿದೆ.

ಕನ್ನಡ ಮಾಧ್ಯಮದ ಅನುದಾನಿತ ಶಾಲೆಗಳ ಅಳಿವು-ಉಳಿವಿನ ಬಗ್ಗೆ ಸಭೆಯಲ್ಲಿ ಚರ್ಚಿಸಿ ಹೋರಾಟದ ರೂಪುರೇಷಗಳನ್ನು ರೂಪಿಸಬೇಕಾಗಿದೆ ಎಂದು ವಿದ್ಯಾದಾನ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಜ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

' ಕವಿ-ಕಾವ್ಯ ಸಂವಾದ' ಕಾರ್ಯಕ್ರಮದಲ್ಲಿ ಕವಿ ವೀರಣ್ಣ ಮಡಿವಾಳರ ಅಭಿಮತ

# ಕಾವ್ಯ ಮನುಕುಲ ವಿಕಾಸದ ರಹದಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಾವ್ಯರಚನೆಯಲ್ಲಿ ತೊಡಗುವ ಇಂದಿನ ಯುವಜನತೆ ವಾಸ್ತವತೆ ಮತ್ತು ಸಾಮಾಜಿಕ ಕಾಳಜಿಯನ್ನು ಕೇಂದ್ರವನ್ನಾಗಿಸಿಕೊಂಡು ಜನಮುಖಿ ಕಾವ್ಯ ರಚಿಸಬೇಕೆಂದು ಕೇಂದ್ರ ಯುವ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಕವಿ ವೀರಣ್ಣ ಮಡಿವಾಳರ ತಿಳಿಸಿದರು.

ನಗರದ ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ವಿಭಾಗದ ವತಿಯಿಂದ ವಿದ್ಯಾರ್ಥಿಗಳೊಂದಿಗೆ ಕವಿ-ಕಾವ್ಯ ಸಂವಾದದಲ್ಲಿ ಮಾತನಾಡುತ್ತಾ ವಿದ್ಯಾರ್ಥಿಗಳೊಂದಿಗೆ ಅವರು ತಮ್ಮ ಅಭಿಪ್ರಾಯ ಹಂಚಿಕೊಂಡರು.

ಕನ್ನಡ ಕಾವ್ಯ ಪರಂಪರೆಗೆ ದೊಡ್ಡ ಇತಿಹಾಸ ಇದೆ. ಕಾವ್ಯ ಲೋಕದ ಹಿಂದಿನ ಈ ಪರಂಪರೆಯನ್ನು ಯುವಕವಿಗಳು ಮುಂದುವರೆಸಬೇಕು. ಇಂದಿನ ಕಾವ್ಯದಲ್ಲಿ ಸಮಕಾಲೀನತೆ ಬಹುಮುಖ್ಯ ಗುಣವಾಗಿ ಗುರುತಿಸಿಕೊಂಡಿದೆ. ಅದರೊಂದಿಗೆ ಚರಿತ್ರೆ, ಪುರಾಣದ ಸಂಗತಿಗಳನ್ನೂ ಕಾವ್ಯ ಮೇಳೈಸಿಕೊಳ್ಳುವ ಅಗತ್ಯವಿದೆ. ಇಂದಿನ ಕವಿಗಳಲ್ಲಿ ಹಿಂದಣ ಹೆಜ್ಜೆಯನರಿತು ಮುಂದಣ ಹೆಜ್ಜೆಯನೂರುವ ಜಾಣ್ಮೆಯ ಕೊರತೆ ಇದೆ. ಲಕ್ಷಗಟ್ಟಲೇ ಕವಿಗಳು




ಹುಟ್ಟಿಕೊಳ್ಳುತ್ತಿರುವ ವರ್ತಮಾನದ ಹೊತ್ತಿನಲ್ಲಿ ವಿಶಿಷ್ಟವಾಗಿ ಗುರುತಿಸಿಕೊಳ್ಳುವ, ತಮ್ಮ ಅಸ್ಮಿತೆ ಕಾಪಾಡಿಕೊಳ್ಳುವ ಹೊಣೆ ಇಂದಿನ ಕವಿಗಳ ಮೇಲಿದೆ. ಕವಿಗಳಿಗೆ ಬರವಣಿಗೆ ಎನ್ನುವುದು ಉಸಿರು ಮತ್ತು ಜೀವಂತಿಕೆಯ ಸಂಕೇತವೂ ಹೌದು. ನಿಜ ಬದುಕಿನ ಅಗ್ನಿದಿವ್ಯದಿಂದೆದ್ದು ಬರುವ ಕಾವ್ಯ ಬಹುಜನರನ್ನು ತಲುಪಲು ಯಶಸ್ವಿಯಾಗುವುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾವಿದ್ಯಾಲಯದ ಉಪಪ್ರಾಚಾರ್ಯರಾದ ಡಾ. ವೀಣಾ ಈ, ಕನ್ನಡದ ಕಾವ್ಯ ಪರಂಪರೆ ಜಗತ್ತಿಗೆ ಮಾದರಿಯಾಗಿದ್ದು, ನಾವೆಲ್ಲರೂ ಕಾವ್ಯ ಬೆಳೆಸುವ ಕಡೆ ಮುಖ ಮಾಡಬೇಕು. ನಮ್ಮ ನೆಲ ಕಾವ್ಯಗಳನ್ನು ಸೃಷ್ಟಿಸುವ ಸುಂದರ ನಾಡು. ಇಲ್ಲಿ ಅನೇಕರು ಕಾವ್ಯಗಳನ್ನು ಬರೆದಿದ್ದಾರೆ, ಆದರೆ ಅವರಿಗೆ ಉತ್ತಮ ವೇದಿಕೆ ದೊರಕಿಲ್ಲ. ಕವನಗಳನ್ನು ಸೃಷ್ಟಿಸುವ ವ್ಯಕ್ತಿಯೂ ಉತ್ತಮ ಕವಿಯಾಗಬಲ್ಲ ಎಂದರು.

ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಅಂದಯ್ಯ ಅರವಟಗಿಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಜಿಲ್ಲೆಗೆ ಅತಿದೊಡ್ಡ ಕಾವ್ಯಪರಂಪರೆಯ ಹಿನ್ನಲೆ ಇದೆ. ಅವರ ದಾರಿಯಲ್ಲಿಯೇ ಸಾಗಬೇಕಿದ್ದ ಯುವಕವಿಗಳು ಪ್ರಸಿದ್ಧಿಯ ಹುಚ್ಚಿಗೆ ಬಿದ್ದಿರುವುದು ದುರಂತ. ದೊಡ್ಡ ಪ್ರಮಾಣದಲ್ಲಿ ಇವತ್ತು ಕಾವ್ಯ ಸೃಷ್ಟಿ ಆಗುತ್ತಿದೆ. ಸಾಮಾಜಿಕ ಜಾಲತಾಣದಲ್ಲಿ ಬರೆಯುವವರೆಲ್ಲ ಉತ್ತಮ ಕಾವ್ಯ ರಚಿಸುತ್ತಿಲ್ಲ. ಅವು ಗದ್ಯರೂಪದಲ್ಲಿ ಇರುತ್ತಿವೆ. ಇದರಿಂದ ಕಾವ್ಯದ ಸತ್ವ ಇಲ್ಲವಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕವಿಗಳೊಂದಿಗೆ ವಿದ್ಯಾರ್ಥಿಗಳ ಸಂವಾದ ಯಶಸ್ವಿಯಾಗಿ ಜರುಗಿತು. ಆರಂಭದಲ್ಲಿ ಮೇಘಾ ಮುದ್ದಿ ಪ್ರಾರ್ಥಿಸಿದರು. ವಿಜಯಲಕ್ಷ್ಮೀ ಬಂಡಿವಾಡ ನಿರೂಪಿಸಿದರು. ಡಾ. ರಾಮಚಂದ್ರ ಪಡೆಸೂರ ವಂದಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಎಲ್ಲ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿ ವೃಂದದವರು ಪಾಲ್ಗೊಂಡಿದ್ದರು.

# ಮಹರ್ಷಿ ವಾಲ್ಮೀಕಿ ಮನುಕುಲದ ದಾರ್ಶನಿಕ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕಲ್ಪನೆಗೆ ನಿಲುಕದ ರಾಮಾಯಣ ಕೃತಿಯನ್ನು ರಚಿಸಿದ ಮಹರ್ಷಿ ವಾಲ್ಮೀಕಿ ಅವರು ಮನುಕುಲದ ದಾರ್ಶನಿಕರಾಗಿದ್ದು, ಅವರ ಆದರ್ಶಗಳನ್ನು ಯುವ ಸಮೂಹ ಅಳವಡಿಸಿಕೊಳ್ಳಬೇಕು ಎಂದು ಪುರಸಭೆ ಸದಸ್ಯ ರಾಜು ಸಾಂಗ್ಲೀಕರ ಹೇಳಿದರು.

ಪಟ್ಟಣದ ಪುರಸಭೆ ಸಭಾ ಭವನದಲ್ಲಿ ಗುರುವಾರ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.



ಸರ್ಕಾರಗಳು ಆಚರಣೆಗೆ ತಂದಿರುವ ಜಯಂತಿಗಳು ಕೇವಲ ಆಚರಣೆಗೆ ಸಿಮಿತವಾಗಬಾರದು. ಜಯಂತಿ ಆಚರಣೆಯ ಹಿಂದಿರುವ ಮಹತ್ವ ತಿಳಿದು ಜಯಂತಿ ಆಚರಣೆಗೆ ನಾವೆಲ್ಲರೂ ಮುಂದಾಗಬೇಕಿದೆ. ಅದರಲ್ಲೂ ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಕಾವ್ಯ ಕಲ್ಪನೆಗೂ ನಿಲುಕದ್ದು, ದೇಶಕ್ಕಷ್ಟೇ ಅಲ್ಲದೆ ವಿಶ್ವಕ್ಕೇ ಮಾದರಿಯಾಗುವಂತಹ ಕಾವ್ಯವಾಗಿದೆ. ವಾಲ್ಮೀಕಿ ಅವರ ವಿಚಾರಧಾರೆಗಳು ಇಂದಿನ ಯುವ ಪೀಳೀಗೆಗೆ ಆದರ್ಶವಾಗಬೇಕು ಎಂದರು. ಪುರಸಭೆ ಸ್ಥಾಯಿ ಸಮಿತಿ ಚೇರಮನ್ ಮುದಿಯಪ್ಪ ಮುಧೋಳ ಮಾತನಾಡಿ, ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಕಾವ್ಯ ಸರ್ವಶ್ರೇಷ್ಠವಾದದ್ದು. ಪೋಷಕರು ಮಕ್ಕಳಿಗೆ ಇತಿಹಾಸ ಹಾಗೂ ಪರಂಪರೆಯನ್ನು ತಿಳಿಸುವುದರ ಜೊತೆಗೆ ಮಾನವಕುಲದ ಒಳಿತಿಗಾಗಿ ನೀಡಿದ ವಿಚಾರಗಳನ್ನು ಅಳವಡಿಸಿಕೊಳ್ಳಲು ನೀತಿಪಾಠದ ಅವಶ್ಯಕತೆಯಿದೆ. ಹೀಗಾಗಿ ಪಾಲಕರು ಮಕ್ಕಳಿಗೆ ಶಿಕ್ಷಣ ನೀಡುವ ಮೂಲಕ ಉತ್ತಮ ವ್ಯಕ್ತಿಗಳನ್ನಾಗಿ ನಿರ್ಮಿಸಿ ದೇಶಕ್ಕೆ ಕೊಡುಗೆ ನೀಡಬೇಕಿದೆ ಎಂದರು.

ಪುರಸಭೆ ಸದಸ್ಯ ಶರಣಪ್ಪ ಉಪ್ಪಿನಬೆಟಗೇರಿ ಹಾಗೂ ಉಪನ್ಯಾಸಕ ಪ್ರಕಾಶ ತಳವಾರ ಮಾತನಾಡಿದರು. ಪುರಸಭೆ ಅಧ್ಯಕ್ಷ ಸುಭಾಸ ಮ್ಯಾಗೇರಿ, ಗಜೇಂದ್ರಗಡ ಮಹರ್ಷಿ ವಾಲ್ಮೀಕಿ ಸಮಾಜದ ಅಧ್ಯಕ್ಷ ಯಮನೂರಪ್ಪ ತಳವಾರ, ಪುರಸಭೆ ಸದಸ್ಯ ಮೂಕಪ್ಪ ನಿಡಗುಂದಿ, ಮುಖಂಡರಾದ ಹುಚ್ಚಪ್ಪ ತಳವಾರ, ದುರಗಪ್ಪ ಮುಧೋಳ, ಭೀಮಣ್ಣ ತಳವಾರ, ಸಿದ್ದಪ್ಪ ಚೋಳೀನ, ಶ್ರೀಕಾಂತ ಹರಪನಹಳ್ಳಿ, ಲಕ್ಷ್ಮಣ ತಳವಾರ, ಫಕೀರಪ್ಪ ತಳವಾರ, ಎಂ.ಎಚ್.ರಂಗಣ್ಣವರ, ಹಾಗೂ ಮಲ್ಲಿಕಾರ್ಜುನಗೌಡ ಬಿ, ರಿಯಾಜ ಒಂಟಿ ಮುಂತಾದವರಿದ್ದರು.

# ಅ.21ರಂದು ಜಿಲ್ಲಾ ಮಟ್ಟದ 'ಜನ ಸಂಪರ್ಕ'

■ವಿಜಯಸಾಕ್ಷಿ ಸುದ್ದಿ, ಧಾರವಾಡ



ನಾಗರಿಕರ ಹಲವಾರು ರೀತಿಯ ಸಮಸ್ಯೆಗಳನ್ನು, ಅಹವಾಲುಗಳನ್ನು ಜಿಲ್ಲಾ ಮಟ್ಟದಲ್ಲಿಯೇ ಆಲಿಸಿ, ಸೂಕ್ತ ಪರಿಹಾರವನ್ನು ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರ ಅಧ್ಯಕ್ಷತೆಯಲ್ಲಿ ಅ.21ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡ ಜಿಲ್ಲಾ ಪಂಚಾಯತ ನೂತನ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಜನಸಂಪರ್ಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಮಟ್ಟದ ಜನ ಸಂಪರ್ಕ ಕಾರ್ಯಕ್ರಮದಲ್ಲಿ ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಸಲ್ಲಿಸಬಹುದು. ಈಗಾಗಲೇ ನಡೆದ ಜನ ಸಂಪರ್ಕ ಕಾರ್ಯಕ್ರಮಗಳಲ್ಲಿ ಸ್ವೀಕೃತವಾದ ಬಹುತೇಕ ಅರ್ಜಿಗಳನ್ನು ನಿಯಮಾನುಸಾರ ವಿಲೇವಾರಿ ಮಾಡಲಾಗಿದೆ. ಇಲಾಖೆಗಳ ಹಾಗೂ ಸರಕಾರದ ಹಂತದಲ್ಲಿ ಬಾಕಿ ಇರುವ ಅರ್ಜಿಗಳನ್ನು ಸಹ ಇತ್ಯರ್ಥಗೊಳಿಸಲು ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಹಿಂದೆ ಸಲ್ಲಿಕೆ ಆಗಿರುವ ಅರ್ಜಿಗಳನ್ನು ಐಪಿಜಿಆರ್‌ಎಸ್ (ಖಕಲುಖಖ) ತಂತ್ರಾಂಶದಲ್ಲಿ ವಿಲೇವಾರಿ ಕ್ರಮ ಜರುಗಿಸಿದ ಮಾಹಿತಿಯೊಂದಿಗೆ ಜಿಲ್ಲೆಯ ಎಲ್ಲ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸದರಿ ಕಾರ್ಯಕ್ರಮಕ್ಕೆ ಖುದ್ದಾಗಿ ಹಾಜರಾಗಲು ಜಿಲ್ಲಾಧಿಕಾರಿಗಳು ಸೂಚಿಸಿದ್ದಾರಲ್ಲದೆ, ಸಾರ್ವಜನಿಕರು ಈ ಕಾರ್ಯಕ್ರಮದ ಸದುಪಯೋಗ ಪಡೆಯಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಸ್‌ದೇವ್ ಅರಣ್ಯದಲ್ಲಿ ಮರಗಳನ್ನು ಕಡಿಯಲು ಮುಂದಾದ ಸರ್ಕಾರ

# ಪೊಲೀಸರ-ಆದಿವಾಸಿಗಳ ನಡುವೆ ಸಂಘರ್ಷ

■ವಿಜಯಸಾಕ್ಷಿ ಸುದ್ದಿ, ಛತ್ತೀಸ್‌ಗಢ

ಛತ್ತೀಸ್‌ಗಢದ 'ಹಸ್‌ದೇವ್ ಅರಣ್ಯ'ದಲ್ಲಿ ಗುರುವಾರ ಹಿಂಸಾಚಾರ ಭುಗಿಲೆದ್ದಿದ್ದು, ಕಲ್ಲಿದ್ದಲು ಗಣಿಗಾರಿಕೆಗೆ ಮರಗಳನ್ನು ಕಡಿಯುವ ವಿಚಾರದಲ್ಲಿ ಸ್ಥಳೀಯ ಆದಿವಾಸಿಗಳು ಮತ್ತು ಪೊಲೀಸರ ನಡುವೆ ಸಂಘರ್ಷ ಏರ್ಪಟ್ಟಿದೆ.

ಇಂಡಿಯನ್ ಎಕ್ಸ್‌ಪ್ರೆಸ್ ವರದಿಯ ಪ್ರಕಾರ, ಘಟನೆಯಲ್ಲಿ ಹಲವಾರು ಪ್ರತಿಭಟನಾಕಾರರು ಮತ್ತು 13 ಪೊಲೀಸ್ ಸಿಬ್ಬಂದಿ ಗಾಯಗೊಂಡಿದ್ದಾರೆ. ಜಿಲ್ಲಾಧಿಕಾರಿ ಹಾಗೂ ಕಂದಾಯ ಸಿಬ್ಬಂದಿಯೊಬ್ಬರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ರಾಜಸ್ಥಾನ ರಾಜ್ಯ ವಿದ್ಯುತ್ ಉತ್ಪಾದನಾ ನಿಗಮ ಲಿಮಿಟೆಡ್ (ಖಖಗಿಗಓಐ)ನ ಪಾರ್ಸಾ ಕಲ್ಲಿದ್ದಲು ಬ್ಲಾಕ್ ಗಣಿಗಾರಿಕೆ ಯೋಜನೆಯ ಭಾಗವಾಗಿ ಸುರ್ಗುಜಾ ಜಿಲ್ಲೆಯ ಫತೇಪುರ್ ಮತ್ತು ಸಾಲಿ ಗ್ರಾಮಗಳ



ಬಳಿ ಮರಗಳನ್ನು ಕಡಿಯಲು ಸರ್ಕಾರ ಗುರುವಾರ ಮುಂದಾಗಿತ್ತು. ಇದಕ್ಕೆ ಸ್ಥಳೀಯ ಆದಿವಾಸಿಗಳಿಂದ ತೀವ್ರ ವಿರೋಧ ವ್ಯಕ್ತವಾಗಿದೆ. ಕಲ್ಲಿದ್ದಲು ಗಣಿಗಾರಿಕೆಗಾಗಿ ಹಸ್‌ದೇವ್ ಅರಣ್ಯ ವ್ಯಾಪ್ತಿಯ ಆರು ಗ್ರಾಮಗಳ ಸುತ್ತಮುತ್ತಲಿನ ಸುಮಾರು 5,000 ಮರಗಳನ್ನು ಕಡಿಯಲು ನಿರ್ಧರಿಸಲಾಗಿದೆ ಎಂದು ವರದಿಗಳು ಹೇಳಿವೆ.

ಗುರುವಾರ ಮರಗಳನ್ನು ಕಡಿಯಲು ಅಧಿಕಾರಿಗಳು ಮತ್ತು ಸಿಬ್ಬಂದಿ ಆಗಮಿಸುತ್ತಾರೆ ಎಂದು ತಿಳಿದ ಸ್ಥಳೀಯರು, ಬುಧವಾರ ರಾತ್ರಿಯಿಂದಲೇ ಉದ್ದೇಶಿತ ಮರ ಕಡಿಯುವ ಸ್ಥಳದಲ್ಲಿ ಜಮಾಯಿಸಿದ್ದರು. ಅವರನ್ನು ತಡೆಯಲು ಸುಮಾರು 400 ಪೊಲೀಸರು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿಯನ್ನು ಸ್ಥಳದಲ್ಲಿ ನಿಯೋಜಿಸಲಾಗಿತ್ತು. ಸ್ಥಳೀಯರು ದೊಣ್ಣೆ, ಕತ್ತಿ, ಬಾಣ ಮತ್ತು ಕೊಡಲಿಗಳೊಂದಿಗೆ ಶಸ್ತ್ರಸಜ್ಜಿತರಾಗಿ ಬಂದಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರು ಪ್ರತಿಭಟನಾಕಾರರ ಮೇಲೆ ಲಾಠಿ ಚಾರ್ಜ್ ಮಾಡಿದ ನಂತರ ಹಿಂಸಾಚಾರ ಪ್ರಾರಂಭವಾಯಿತು ಎಂಬ ಆರೋಪವನ್ನು ಸುರ್ಗುಜಾ ಪೊಲೀಸ್ ವರಿಷ್ಠಾಧಿಕಾರಿ ಯೋಗೇಶ್ ಪಟೇಲ್ ನಿರಾಕರಿಸಿದ್ದಾರೆ. "ಗ್ರಾಮಸ್ಥರು ಹಿಂಸಾತ್ಮಕವಾಗಿ ನಮ್ಮ ಮೇಲೆ ಹಲ್ಲೆ ನಡೆಸಿದರು. ಅವರನ್ನು ಎದುರಿಸಲು ಮತ್ತು ಸ್ಥಳದಿಂದ ಚದುರಿಸಲು ನಾವು ಪ್ರತಿಕ್ರಿಯಿಸಿದ್ದೇವೆ" ಎಂದಿದ್ದಾರೆ.

ಪೊಲೀಸ್ ಕಾನ್‌ಸ್ಟೇಬಲ್ ಭೋಲಾರಾಮ್ ರಾಜ್‌ವಾಡೆ ಅವರ ಕಾಲಿಗೆ ಸ್ಥಳೀಯರು ಬಾಣ ಬಿಟ್ಟಿದ್ದು, ಗಂಭೀರವಾಗಿ ಗಾಯಗೊಂಡಿರುವ ಅವರನ್ನು ಚಿಕಿತ್ಸೆಗಾಗಿ ರಾಯಪುರಕ್ಕೆ ಕರೆದೊಯ್ಯಲಾಗಿದೆ ಎಂದು ತಿಳಿಸಿದ್ದಾರೆ.

ಘಟನೆಯ ಕುರಿತು ಪ್ರತಿಕ್ರಿಯಿಸಿರುವ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಛತ್ತೀಸ್‌ಗಢದ ಬಿಜೆಪಿ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

# ಬೆಂಬಲ ವ್ಯಕ್ತಿಗಳಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಸ್ಕೋ) ಕಾಯ್ದೆ-2012ರಡಿ ಸಂತ್ರಸ್ಥ ಮಕ್ಕಳಿಗೆ ಕಾನೂನು ಪ್ರಕ್ರಿಯೆಗಳ ಸಮಯದಲ್ಲಿ ಭಾವನಾತ್ಮಕ ಮತ್ತು ಮಾನಸಿಕ ಬೆಂಬಲ ಒದಗಿಸಲು ಮತ್ತು ಮಕ್ಕಳ ಯೋಗಕ್ಷೇಮ ಹಾಗೂ ರಕ್ಷಣೆ ಖಾತ್ರಿಪಡಿಸಲು ಬೆಂಬಲ ವ್ಯಕ್ತಿಯಾಗಿ ಸೇವೆ ಸಲ್ಲಿಸಲು ಇಚ್ಛಿಸುವ ಅರ್ಹ ವ್ಯಕ್ತಿ/ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರತಿ ಪ್ರಕರಣಕ್ಕೆ ಸರಕಾರದ ಆದೇಶದಂತೆ ನಿಗದಿಪಡಿಸಿದ ಆರ್ಥಿಕ ಸಹಾಯಧನ ನೀಡಲಾಗುತ್ತದೆ. ಅಭ್ಯರ್ಥಿಗಳು ಸ್ನಾತಕೋತ್ತರ ಪದವಿ (ಸಮಾಜ ಕಾರ್ಯ ಅಥವಾ ಸಮಾಜ ಶಾಸ್ತ್ರ ಅಥವಾ ಮನಶಾಸ್ತ್ರ ಅಥವಾ ಮಕ್ಕಳ ಅಭಿವೃದ್ಧಿ) ಅಥವಾ ಮಕ್ಕಳ ಶಿಕ್ಷಣ ಮತ್ತು ಅಭಿವೃದ್ಧಿ ಹಾಗೂ ರಕ್ಷಣೆ ಕ್ಷೇತ್ರದಲ್ಲಿ 03 ವರ್ಷಗಳ ಅನುಭವದೊಂದಿಗೆ ಪದವಿ (ಸಮಾಜ ಕಾರ್ಯ ಅಥವಾ ಸಮಾಜ ಶಾಸ್ತ್ರ ಅಥವಾ ಮನಶಾಸ್ತ್ರ ಅಥವಾ ಮಕ್ಕಳ ಅಭಿವೃದ್ಧಿ) ಹೊಂದಿರಬೇಕು. ಮಕ್ಕಳ ಪಾಲನಾ ಸಂಸ್ಥೆ/ಆರೈಕೆ ಕೇಂದ್ರದಲ್ಲಿ ಕೆಲಸ ಮಾಡುವವರು ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ ಕ್ಷೇತ್ರದಲ್ಲಿ ಕೆಲಸ ಮಾಡುವ ಸಂಸ್ಥೆ ಕೂಡ ಅರ್ಜಿ ಸಲ್ಲಿಸಬಹುದು.

ಆಯ್ಕೆಯಾದ ಅಭ್ಯರ್ಥಿಗಳಿಗೆ ಕೇತ್ರ ಕಾರ್ಯ ಮಾಡಲು ಮತ್ತು ಅಪರಾಧ ನ್ಯಾಯ ವ್ಯವಸ್ಥೆಯ ಮೂಲಕ ಮಕ್ಕಳಿಗೆ ಮತ್ತು ಅವರ ಕುಟುಂಬಗಳಿಗೆ ಸಹಾಯ ಮಾಡಲು ತರಬೇತಿ ನೀಡಲಾಗುತ್ತದೆ.

ಅರ್ಜಿಗಳನ್ನು ಪ್ರಮಾಣ ಪತ್ರಗಳೊಂದಿಗೆ ಅಕ್ಟೋಬರ್ 24 ರಂದು ಸಂಜೆ 5.30ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ 225, 2ನೇ ಮಹಡಿ, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರೋಡ್, ಗದಗ-582 103 ಈ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಯಿಂದ ಪಡೆಯುಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 9480360171 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಣ ಅಕ್ರಮ ವರ್ಗಾವಣೆ ಪ್ರಕರಣ: ಎಎಪಿ ನಾಯಕ ಜೈನ್‌ಗೆ ಜಾಮೀನು

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಹಣ ಅಕ್ರಮ ವರ್ಗಾವಣೆ ಪ್ರಕರಣ । 2 ವರ್ಷಗಳ ನಂತರ ಎಎಪಿ ನಾಯಕ ಸತ್ಯೇಂದ್ರ ಜೈನ್‌ಗೆ ಜಾಮೀನು

ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದ ಎಎಪಿ ನಾಯಕ, ದೆಹಲಿಯ ಮಾಜಿ ಸಚಿವ ಸತ್ಯೇಂದ್ರ ಜೈನ್ ಅವರಿಗೆ ದೆಹಲಿ ನ್ಯಾಯಾಲಯವು ಶುಕ್ರವಾರ ಜಾಮೀನು ಮಂಜೂರು ಮಾಡಿದೆ. ಪ್ರಕಣದ ವಿಚಾರಣೆಯು ವಿಳಂಬವಾಗುತ್ತಿದ್ದು, ಜೊತೆಗೆ ಆರೋಪಿ ದೀರ್ಘ ಕಾಲದಿಂದ ಸೆರೆವಾಸದಲ್ಲಿದ್ದಾರೆ ಎಂಬ



ವಿಚಾರವನ್ನು ನ್ಯಾಯಾಲಯ ಉಲ್ಲೇಖಿಸಿದೆ.

ಸತ್ಯೇಂದ್ರ ಜೈನ್ ಅವರಿಗೆ ಸಂಬಂಧಿಸಿರುವ ನಾಲ್ಕು ಕಂಪನಿಗಳ ಮೂಲಕ ಹಣ ಅಕ್ರಮ ವರ್ಗಾವಣೆ ಮಾಡಲಾಗಿದೆ ಎಂದು ಆರೋಪಿಸಿ 2022ರ ಮೇ 30ರಂದು ಜಾರಿ ನಿರ್ದೇಶನಾಲಯ (ಇಡಿ) ಅವರನ್ನು ಬಂಧಿಸಿತ್ತು. ಅಂದಿನಿಂದ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ. ಆದಾಗ್ಯೂ, ಅವರು 2023ರ ಮೇ ಮತ್ತು 2024ರ ಮಾರ್ಚ್ ನಡುವೆ ವೈದ್ಯಕೀಯ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು.

"ವಿಚಾರಣೆಯಲ್ಲಿನ ವಿಳಂಬ ಮತ್ತು 18 ತಿಂಗಳ ಸುದೀರ್ಘ ಸೆರೆವಾಸವನ್ನು ಪರಿಗಣಿಸಿ ಮತ್ತು ಪ್ರಕರಣದ ತನಿಖೆ ಪ್ರಾರಂಭಿಸಲು ಬಹಳ ಸಮಯ ತೆಗೆದುಕೊಳ್ಳುತ್ತದೆ ಎಂಬ ಅಂಶವನ್ನು ಪರಿಗಣಿಸಿ ಈ ತೀರ್ಮಾನಕ್ಕೆ ಬಂದಿದ್ದು, ಆರೋಪಿಯು ಜಾಮೀನಿಗೆ ಅರ್ಹರಾಗಿದ್ದಾರೆ" ಎಂದು ವಿಶೇಷ ನ್ಯಾಯಾಧೀಶ ವಿಶಾಲ್ ಗೋಗ್ನೆ ಹೇಳಿದ್ದಾರೆ.

# ವೈಯಕ್ತಿಕ ಕಾನೂನುಗಳಿಂದ ಬಾಲ್ಯವಿವಾಹ ನಿಷೇಧ ಕಾಯ್ದೆ ತಡೆಯಲು ಸಾಧ್ಯವಿಲ್ಲ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

"ಬಾಲ್ಯ ವಿವಾಹ ನಿಷೇಧ ಕಾಯ್ದೆಯನ್ನು ಯಾವುದೇ ವೈಯಕ್ತಿಕ ಕಾನೂನಿನಡಿ ಸಂಪ್ರದಾಯಗಳ ಹೆಸರಿನಲ್ಲಿ ದುರ್ಬಲಗೊಳಿಸಲು ಸಾಧ್ಯವಿಲ್ಲ. ಬಾಲ್ಯ ವಿವಾಹಗಳು ಜೀವನ ಸಂಗಾತಿಯನ್ನು ಆಯ್ಕೆ ಮಾಡುವ ವ್ಯಕ್ತಿಯ ಸ್ವಾತಂತ್ರ್ಯವನ್ನು ಹರಣ ಮಾಡುತ್ತವೆ" ಎಂದು ಸುಪ್ರೀಂ ಕೋರ್ಟ್ ಶುಕ್ರವಾರ (ಅ.18) ಹೇಳಿದೆ.

ನೆರೆ ಪೀಡಿತ ಪ್ರದೇಶಗಳಿಗೆ ಜಿಲ್ಲಾಧಿಕಾರಿ ಭೇಟಿ | ಬೆಳೆ, ಮನೆ, ರಸ್ತೆ, ಸೇತುವೆ ಹಾನಿ ಪರಿಶೀಲನೆ

# ರೈತರಿಗೆ ಅನ್ಯಾಯವಾಗದಂತೆ ಎಚ್ಚರ ವಹಿಸಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಅಕ್ಟೋಬರ್ ಆರಂಭದಿಂದ ನಿರಂತರವಾಗಿ ಜಿಲ್ಲೆಯಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಸಾಕಷ್ಟು ಹಾನಿ ಆಗಿದೆ. ಈ ಕುರಿತು ಪೀಡಿತ ಪ್ರದೇಶಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಶುಕ್ರವಾರ ಭೇಟಿ ನೀಡಿ, ಪರಿಶೀಲಿಸಿದರು.

ಪ್ರವಾಸ ಸಂದರ್ಭದಲ್ಲಿ ವಿವಿಧ ಗ್ರಾಮಗಳ ರೈತರನ್ನು, ಜನಪ್ರತಿನಿಧಿಗಳನ್ನು ಮತ್ತು ಸಾರ್ವಜನಿಕರನ್ನು ಭೇಟಿ ಮಾಡಿ, ಅಹವಾಲು ಆಲಿಸಿ, ಮನವಿ ಸ್ವೀಕರಿಸಿದರು. ಬೆಳೆಹಾನಿ ಬಗ್ಗೆ ತುರ್ತಾಗಿ ಜಂಟಿ ಸಮೀಕ್ಷೆ ಮಾಡಲು ಅಧಿಕಾರಿಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ. ಮನೆ ಹಾನಿ ಮತ್ತು ಮನೆಗಳಿಗೆ ನೀರು ನುಗ್ಗಿ ಹಾನಿ ಆಗಿರುವ ಬಗ್ಗೆ ವರದಿ ಸಲ್ಲಿಸಿ, ಅದಕ್ಕೆ ಪರಿಹಾರ ಕ್ರಮ ಜರುಗಿಸಲು ಗ್ರಾಮ ಪಂಚಾಯತ ಮತ್ತು ತಹಸೀಲ್ದಾರರಿಗೆ ಸೂಚಿಸಲಾಗಿದೆ ಎಂದು ಗ್ರಾಮಸ್ಥರ ಭೇಟಿ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ತುಪ್ಪರಿಹಳ್ಳಕ್ಕೆ ಆಯಟ್ಟಿ ಮತ್ತು ಶಿರೂರ ಮಧ್ಯ ನಿರ್ಮಿಸಿರುವ ಸೇತುವೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಶಿರೂರ ಹಾಗೂ ಆಯಟ್ಟಿ ಗ್ರಾಮಸ್ಥರಿಂದ ಮನವಿ ಸ್ವೀಕರಿಸಿದರು. ಸೇತುವೆ ಎತ್ತರಗೊಳಿಸಲು ಕ್ರಮಕೈಗೊಳ್ಳುವುದಾಗಿ ತಿಳಿಸಿದರು. ಹಾರೊಬೆಳವಡಿ ಆಯಟ್ಟಿ ರಸ್ತೆ ಅಭಿವೃದ್ಧಿ ಬಗ್ಗೆ ಪರಿಶೀಲಿಸುವದಾಗಿ ಅವರು ತಿಳಿಸಿದರು. ನಂತರ ಅವರು ಆಯಟ್ಟಿ ಗ್ರಾಮದ ಫಕ್ಕೀರಪ್ಪ ಜೋಗನ್ನವರ ತೋಟದಲ್ಲಿ ಹಳ್ಳದ ನೆರೆ ಹಾಗೂ ಅತಿ ಮಳೆಯಿಂದಾಗಿ ಹಾಳಾಗಿರುವ ಹತ್ತಿ ಬೆಳೆ ಮತ್ತು ಕಡ್ಲಿ ಬೆಳೆ ಪರಿಶೀಲಿಸಿದರು.

ನಿರಂತರ ಮಳೆಯಿಂದಾಗಿ ಹಾನಿಗೀಡಾಗಿರುವ ತಿರ್ಲಾಪುರ-ಮೊರಬ ಸಂಪರ್ಕ ರಸ್ತೆ ಪರಿಶೀಲಿಸಿ, ಪಿಡಬ್ಲ್ಯೂಡಿ ಸೆಕ್ಷನ್ ಅಧಿಕಾರಿ ಕಲ್ಮೇಶ ಅವರಿಗೆ ತಕ್ಷಣ ದುರಸ್ತಿಗೆ ಕ್ರಮವಹಿಸಲು ಸೂಚಿಸಿದರು. ಇಲಾಖೆ ಅನುದಾನ ಬಳಸಿ, ಜನರ ಸಂಚಾರಕ್ಕೆ ಅಡಚಣೆ ಆಗದಂತೆ ದುರಸ್ತಿ ಕೈಗೊಳ್ಳಲು ಜಿಲ್ಲಾಧಿಕಾರಿಗಳು ತಿಳಿಸಿದರು.




> ಜಿಲ್ಲಾಧಿಕಾರಿಗಳು ತಮ್ಮ ನೆರೆ ಪ್ರವಾಸ ಸಂದರ್ಭದಲ್ಲಿ ಕಿರೆಸೂರ ಗ್ರಾಮದ ಶೇಂಗಾ (ನೆಲಗಡಲೆ), ಈರುಳ್ಳಿ ಮತ್ತು ಹತ್ತಿ ಹೊಲಗಳಿಗೆ ಭೇಟಿ ನೀಡಿ ರೈತರ ಸಮಸ್ಯೆ ಆಲಿಸಿದರು. ರಸ್ತೆ ಪಕ್ಕದಲ್ಲಿ ಈರುಳ್ಳಿ ರಾಶಿ ಸ್ವಚ್ಛಗೊಳಿಸುತ್ತಿದ್ದ ರಫೀಕಸಾಬ ಮತ್ತೆಸಾಬನವರ ಹೊಲಕ್ಕೆ ಭೇಟಿ ನೀಡಿ ಮಳೆ ನೀರು ಹಾಗೂ ತಂಪು ವಾತಾವರಣದಿಂದ ಈರುಳ್ಳಿ ಕೊಳೆಯುತ್ತಿರುವುದನ್ನು ಸ್ವತಃ ಪರಿಶೀಲಿಸಿದರು. ಅಲ್ಲಿಂದ ಶೇಂಗಾ ಬೆಳೆ ಒಕ್ಕಲು ಹಾಕಿದ್ದನ್ನು ಹೊರ ತೆಗೆಯುತ್ತಿದ್ದ ಕಿರೆಸೂರ ರೈತ ಶಿವಾನಂದ ಇನಾಮತಿ ಅವರ ಶೇಂಗಾ ಬೆಳೆ ವೀಕ್ಷಿಸಿದರು.

ಸುಮಾರು 8 ಎಕರೆ ಹತ್ತಿ ಬೆಳೆದಿದ್ದ ಮೊರಬ ಗ್ರಾಮದ ರೈತ ಮಹಾದೇವಪ್ಪ ಗೊಡಿಕಟ್ಟಿ ಅವರ ಹತ್ತಿ ಬೆಳೆ ಮಳೆ ನೀರಿನಿಂದಾಗಿ ಹಾಳಾಗಿದೆ. ಹತ್ತಿ ಬಿಡು ಬಿಟ್ಟಿದ್ದು, ಹತ್ತಿಕಾಯಿಯಲ್ಲಿ ಮಳೆ ನೀರು ಸೇರಿ ಹತ್ತಿ ನಾಶವಾಗುತ್ತಿದೆ. ಇಂತಹ ಎಲ್ಲ ಬೆಳೆಗಳನ್ನು ಸರಿಯಾಗಿ ಸಮೀಕ್ಷೆ ಮಾಡಿ, ದಾಖಲಿಸಬೇಕು. ರೈತರಿಗೆ ಅನ್ಯಾಯವಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ತಹಸೀಲ್ದಾರ ಸುಧೀರ ಸಾಹುಕಾರ, ಪ್ರಕಾಶ ನಾಶಿ, ರಾಜು ಮಾವರಕರ, ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಅಜಿತಕುಮಾರ ಮಶಾಲ್ದಿ, ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಗ್ರಾ.ಪಂ ಸದಸ್ಯರು, ಕೃಷಿ, ತೋಟಗಾರಿಕೆ, ಲೋಕೋಪಯೋಗಿ, ಪಂಚಾಯತ ರಾಜ್, ಅಗ್ನಿಶಾಮಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದು, ಹಾನಿ ವರದಿ ನೀಡಿದರು.

## ಎಚ್.ಡಿ.ಡಿ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ



ಮಂಡ್ಯದಲ್ಲಿ ನಡೆಯುವ 87ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರನ್ನು ಆಯ್ಕೆ ಮಾಡಲು ಜೆ.ಡಿ.ಎಸ್. ರಾಜ್ಯ ವಕ್ತಾರ ವೆಂಕನಗೌಡ ಆರ್.ಗೋವಿಂದಗೌಡ್ರ ಆಗ್ರಹಿಸಿದ್ದಾರೆ.

ದೇವೇಗೌಡರು ಮುಖ್ಯಮಂತ್ರಿಯಾಗಿ ರಾಜ್ಯಕ್ಕೆ ಹಲವಾರು ಕೊಡುಗೆಗಳನ್ನು ನೀಡಿದ್ದಾರೆ. ನೀರಾವರಿ ಇಲಾಖೆಗೆ ಹೆಚ್ಚಿನ ಅನುದಾನ ನೀಡಿದ್ದಾರೆ. ಹುಬ್ಬಳ್ಳಿ ಈದ್ಗಾ ಮೈದಾನದ ವಿವಾದವನ್ನು ಬಗೆಹರಿಸಿದ್ದಾರೆ. ತಮ್ಮ ಆರು ದಶಕಗಳ ಸುದೀರ್ಘ ರಾಜಕೀಯ ಅವಧಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕರ್ನಾಟಕದ ಜನರ ಮನಸ್ಸನ್ನು ಗೆದ್ದಿದ್ದಾರೆ. 92 ವರ್ಷದ ಈ ಇಳಿವಯಸ್ಸಿನಲ್ಲಿಯೂ ಕೂಡಾ ಕನ್ನಡ ನಾಡು, ನುಡಿ, ಜಲ, ವಿವಾದಗಳ ಬಂದಾಗ ನಾಯಕತ್ವದ ಮುಂಚೂಣಿಯನ್ನು ವಹಿಸಿಕೊಂಡು ರಾಜ್ಯದ ಪರವಾಗಿ ಧ್ವನಿ ಎತ್ತಿದ್ದಾರೆ.

ಹೀಗಾಗಿ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಎಚ್.ಡಿ. ದೇವೇಗೌಡ ಅವರನ್ನು ಆಯ್ಕೆ ಮಾಡಬೇಕೆಂದು ವೆಂಕನಗೌಡ ಆರ್. ಗೋವಿಂದಗೌಡ್ರ ಪತ್ರಿಕಾ ಪ್ರಕಟಣೆಯ ಮೂಲಕ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಗಿರೀಶ ಸಂಶಿ, ಜೋಸೆಫ್ ಉದೋಜಿ, ಕೆ.ಎಫ್. ದೊಡ್ಡಮನಿ, ಬಸವರಾಜ ಅಪ್ಪಣ್ಣವರ, ಸಂತೋಷ ಪಾಟೀಲ, ಪ್ರಫುಲ ಪುಣೇಕರ, ರಮೇಶ ಹುಣಸೀಮರದ, ದೇವಪ್ಪ ಮಲ್ಲಸಮುದ್ರ, ಸಿದ್ದಲಿಂಗಯ್ಯ ಹೊಂಬಾಳಿಮಠ, ಜಿ.ಕೆ. ಕೊಳ್ಳಿಮಠ, ಮಂಜುಳಾ ಮೇಟಿ ಇದ್ದರು.



ಮಾಧ್ಯಮ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ನೀಡುವ 'ಮೊಹರೆ ಹನುಮಂತರಾಯ ಪ್ರಶಸ್ತಿ ಸ್ವೀಕರಿಸಿದ ನವೋದಯ ಪತ್ರಿಕೆಯ ಸಂಪಾದಕರಾದ ರಾಜೀವ್ ಕಿದಿಯೂರ್ ಅವರಿಗೆ ಸಭಾಪತಿ ಬಸವರಾಜ್ ಹೊರಟ್ಟಿ ಹಿತೈಷಿ ಬಳಗ ಹಾಗೂ ವಿದ್ಯಾವರ್ಧಕ ಸಂಸ್ಥೆಯ ವತಿಯಿಂದ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಡಾ. ಬಸವರಾಜ ಧಾರವಾಡ, ವಿದ್ಯಾವರ್ಧಕ ಸಂಸ್ಥೆಯ ಗೌರವ ಕಾರ್ಯದರ್ಶಿ ವೀರನಗೌಡ ಪಾಟೀಲ್, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ, ಮುಖ್ಯೋಪಾಧ್ಯಾಯ ಎಂ.ಎಚ್. ಪೂಜಾರ್, ಎಸ್.ಜಿ. ಕೊಲ್ಮಿ ಮುಂತಾದವರು ಉಪಸ್ಥಿತರಿದ್ದರು.

# ಶ್ರೀಮಠಕ್ಕೆ ವಟುಸಾಧಕರ ಭೇಟಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಶಾಖಾ ಶಿವಯೋಗ ಮಂದಿರ ನಿಡಗುಂದಿಕೊಪ್ಪದ ಶ್ರೀ ಮಠಕ್ಕೆ ಶಿವಯೋಗ ಮಂದಿರದ ವಟುಸಾಧಕರು ಭೇಟಿ ನೀಡಿದ್ದರು.

ಹಾವೇರಿ ಹುಕ್ಕೇರಿಮಠ, ಶಿವಯೋಗ ಮಂದಿರ ಶ್ರೀಮದ್ವೀರಶೈವ ಸಂಸ್ಥೆಯ ಉಪಾಧ್ಯಕ್ಷರಾದ ಪರಮಪೂಜ್ಯ ಸದಾಶಿವ ಮಹಾಸ್ವಾಮಿಗಳವರ ಅಪ್ಪಣೆಯಂತೆ ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಪರಮಪೂಜ್ಯ ಮುಪ್ಪಿನಬಸವಲಿಂಗ ಮಹಾಸ್ವಾಮೀಜಿಯವರ ಮಾರ್ಗದರ್ಶನದ ಮೇರೆಗೆ ನಿಡಗುಂದಿ ಕೊಪ್ಪದ ಪರಮಪೂಜ್ಯ ಅಭಿನವ ಚನ್ನಬಸವ ಮಹಾಸ್ವಾಮಿಗಳವರ ನೇತೃತ್ವದಲ್ಲಿ ಪೂಜ್ಯರಾದ ನಾಗಿನಾಥ ದೇವರ ಉಪಸ್ಥಿತಿಯಲ್ಲಿ ಶ್ರೀ ಮದ್ವೀರಶೈವ ಶಿವಯೋಗ ಮಂದಿರದಿಂದ ವಟುಸಾಧಕರು ಭೇಟಿ ನೀಡಿ ಲಿಂ. ಚನ್ನಬಸವ ಶಿವಯೋಗಿಗಳವರ ಹಾಗೂ ಶಿವಬಸವ ಸ್ವಾಮೀಜಿಯವರ ಕರ್ತೃ ಗದ್ದುಗೆಯ ಆಶೀರ್ವಾದ ಪಡೆದರು.



ಈ ಸಂದರ್ಭದಲ್ಲಿ ಸಾಧಕ ವಟುಗಳನ್ನು ಕುರಿತು ಆಶೀರ್ವಚನ ನೀಡಿದ ಅಭಿನವ ಚನ್ನಬಸವ ಮಹಾಸ್ವಾಮಿಗಳು, ಪೂರ್ವ ಜನ್ಮದ ಪುಣ್ಯವಿದ್ದರೆ ಮಾತ್ರ ಸಮಾಜದಲ್ಲಿ ಸ್ವಾಮಿತ್ವದ ಸ್ಥಾನ ಸಿಗುತ್ತದೆ. ಮುಂದೆ ನೀವು ಸ್ವಾಮೀಜಿಗಳಾಗಿ ಈ ಸಮಾಜವನ್ನು ಮುನ್ನಡೆಸುವವರಾಗುತ್ತೀರಿ. ಆ ಸಂದರ್ಭದಲ್ಲಿ ಸಮಾಜದೊಂದಿಗೆ, ಭಕ್ತರೊಂದಿಗೆ ಹೇಗೆ ನಡೆದುಕೊಳ್ಳಬೇಕೆಂಬುದನ್ನು ಚೆನ್ನಾಗಿ ತಿಳಿದಿರಬೇಕು. ಶಿವಯೋಗ ಮಂದಿರದ ಶ್ರೀ ಮದ್ವೀರಶೈವ ಸಂಸ್ಥೆ ಈ ತರಬೇತಿಯನ್ನು ಎಂದಿನಿಂದಲೂ ನೀಡುತ್ತ ಬಂದಿದೆ. ಇದೆಲ್ಲ ಹಾನಗಲ್ಲ ಶ್ರೀ ಗುರು ಕುಮಾರಸ್ವಾಮಿಗಳವರ ಮತ್ತು ಹಾಲಕೆರೆಯ ಶ್ರೀ ಅನ್ನದಾನೇಶ್ವರ ಶ್ರೀಗಳವರ ಕೃಪೆ. ಈಗ ಸಾಧಕ ವಟುಗಳಾಗಿರುವ ತಾವುಗಳು ಮುಂದಿನ ದಿನಗಳಲ್ಲಿ ಅತ್ಯುತ್ತಮ ಮಠಾಧೀಶರಾಗಿ ಕಾರ್ಯ ನಿರ್ವಹಿಸಿ. ನಿಮ್ಮೆಲ್ಲರ ಮೇಲೆ ಶ್ರೀ ಚನ್ನಬಸವ ಶಿವಯೋಗಿಗಳವರ ಆಶೀರ್ವಾದ ಎಂದಿಗೂ ಇರಲಿ ಎಂದು ಹಾರೈಸಿದರು.

# ಚೇಂಬರ್ ಅಧ್ಯಕ್ಷ, ಕಾರ್ಯದರ್ಶಿಗೆ ಸನ್ಮಾನ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ನೂತನ ಪದಾಧಿಕಾರಿಗಳಿಗೆ ನರಸಾಪೂರ ಇಂಡಸ್ಟ್ರಿಯಲ್ ಅಸೋಶಿಯೇಶನ್‌ನ ಪದಾಧಿಕಾರಿಗಳು ಶುಕ್ರವಾರ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಸನ್ಮಾನಿಸಿದರು.

ಚೇಂಬರ್‌ನ ನೂತನ ಅಧ್ಯಕ್ಷ ತಾತನಗೌಡ ಪಾಟೀಲ, ಕಾರ್ಯದರ್ಶಿ ಅಶೋಕಗೌಡ ಪಾಟೀಲ ಅವರನ್ನು ಸನ್ಮಾನಿಸಿ, ಎಲ್ಲ ನೂತನ ಪದಾಧಿಕಾರಿಗಳಿಂದ ಗದಗ ಜಿಲ್ಲೆಯ ವಾಣಿಜ್ಯ ಕ್ಷೇತ್ರ ಪ್ರಗತಿಯಾಗಲಿ, ಸರಕಾರದ ಮೂಲಕ ಹೊಸ ಹೊಸ ಯೋಜನೆಗಳು ಅನುಷ್ಠಾನಗೊಳಿಸಲು, ವ್ಯಾಪಾರಸ್ಥರ ತೊಂದರೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಉತ್ತಮ ಕೆಲಸಗಳು ಆಗಲೆಂದು ಶುಭ ಹಾರೈಸಿದರು. ನರಸಾಪೂರ ಇಂಡಸ್ಟ್ರೀಯಲ್ ಅಸೋಶಿಯೇಶನ್‌ನ ಅಧ್ಯಕ್ಷ ಶಿವಕುಮಾರ ಪಾಟೀಲ, ಸಲಹಾ ಸಮಿತಿಯ ಸದಸ್ಯರಾದ ಬಸವರಾಜ ಅಂಗಡಿ, ಉಪಾಧ್ಯಕ್ಷ ದಶರಥರಾಜ ಕೊಳ್ಳಿ, ಕಾರ್ಯದರ್ಶಿ ವಿನೋದ ಪಟೇಲ್, ಖಜಾಂಚಿ ಸಿ.ಜಿ. ಹಿರೇಗೌಡ್ರ, ಸಹ ಕಾರ್ಯದರ್ಶಿ ಈರಣ್ಣ ಗೊಡಚಿ, ಎಸ್.ಆರ್. ನಲತ್ವಾಡಮಠ ಸೇರಿದಂತೆ ಚೇಂಬರ್ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

ಹಾವೇರಿಯ ನೈಸ್ ಆಕಾಡೆಮಿ ಸಭಾಂಗಣದಲ್ಲಿ ಪ್ರಶಸ್ತಿ ಪ್ರದಾನ

# ಬಿ.ಶ್ರೀನಿವಾಸ್‌ಗೆ 'ನಿರಂತರ ಸಾಹಿತ್ಯ' ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ




ಹಿರಿಯ ಕತೆಗಾರ, ಸಮ ಸಮಾಜದ ಕನಸುಗಾರ, ದಾವಣಗೆರೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿ ಬಿ. ಶ್ರೀನಿವಾಸ್ ಅವರಿಗೆ ಗಜೇಂದ್ರಗಡದ ಮಕಾನದಾರ ಸಾಹಿತ್ಯ ಪ್ರತಿಷ್ಠಾನ, ಗದಗನ ನಿರಂತರ ಪ್ರಕಾಶನದ ಅಡಿಯಲ್ಲಿ ನೀಡುವ ನಿರಂತರ ಸಾಹಿತ್ಯ ಪುರಸ್ಕಾರ-2024ಕ್ಕೆ ಭಾಜನರಾಗಿದ್ದಾರೆ.

ಅ.20ರಂದು ಹಾವೇರಿಯ ನೈಸ್ ಆಕಾಡೆಮಿ ಸಭಾಂಗಣದಲ್ಲಿ ನಿರಂತರ ಪ್ರಕಾಶನ, ಹಾವೇರಿ ಸಾಹಿತಿ ಕಲಾವಿದರ ಬಳಗ, ನೈಸ್ ಅಕಾಡೆಮಿ ಇವರ ಸಂಯುಕ್ತಾಶ್ರಯದಲ್ಲಿ ಹಿರಿಯ ಬಂಡಾಯ ಸಾಹಿತಿ ರಂಗಭೂಮಿ ತಜ್ಞ, ಸತೀಶ್ ಕುಲಕರ್ಣಿಯವರು ಪ್ರಶಸ್ತಿ ಪ್ರದಾನ ಮಾಡುವರು. ಹಾವೇರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಲಿಂಗಯ್ಯ ಹಿರೇಮಠ ಅಧ್ಯಕ್ಷತೆ ವಹಿಸುವರು.

ಪದವಿ ಕಾಲೇಜಿನ ಹಿಂದಿ ವಿಭಾಗದ ಮುಖ್ಯಸ್ಥೆ ಡಾ.ಮಹಾದೇವಿ ಕಣವಿ ಕೃತಿಯ ಅವಲೋಕನ ಮಾಡುವರು. ಆನವಟ್ಟಿ ಸರಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಅರುಣಕುಮಾರ್ ಹೆಚ್.ಜಿ. ಅತಿಥಿಗಳಾಗಿ ಪಾಲ್ಗೊಳ್ಳುವರು. ಉಪನ್ಯಾಸಕ, ಕವಿ ರಮಜಾನ್ ಹೆಬಸೂರು ಪ್ರಶಸ್ತಿ ಪುರಸ್ಕೃತರ ಕುರಿತಾಗಿ ಮಾತಾಡುವರು. ಸಾಹಿತಿ ಎ.ಎಸ್. ಮಕಾನದಾರ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಡಾ. ಉಮೇಶಪ್ಪ, ನ್ಯಾಯವಾದಿ ಸಲೀಂ ಎಂ.ಜವಳಿ, ಕವಿ ಚಂದ್ರಕಾಂತ ಕುಳೇನೂರು, ನೈಸ್ ಅಕಾಡೆಮಿ ನಿರ್ದೇಶಕ ನಿಂಗರಾಜ್ ಸುಳ್ಳಳ್ಳಿ, ಸಂಗಮೇಶ್ವರ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ನಿರ್ದೇಶಕ ರವಿ ಹುಚ್ಚನಗೌಡರ, ಕವಯತ್ರಿ ಲತಾ ರಮೇಶ್ ವಾಲಿ, ಭಾನುವಳ್ಳಿ ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕಿ ಸಬೀನಾ ಬಾನು ಹಜರೆ ಸಾಬ್ ನದಾಫ್ ಮುಂತಾದವರು ಉಪಸ್ಥಿತರಿರುವರು.



> ಹಿರಿಯ ಜನಪದ ವಿದ್ವಾಂಸ ಶಂಭು ಬಳಿಗಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳವರು. ಇದೇ ಸಂಧರ್ಭದಲ್ಲಿ ದಾವಣಗೆರೆ ಡಯಟ್‌ನ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ಅಗಲಿದ ಕವಿ, ತಾಲೂಕು ಕಸಾಪ ಮಾಜಿ ಅಧ್ಯಕ್ಷ ಹಜರೆಸಾಬ್ ಬಿ.ನದಾಫ್‌ರ ಬದುಕು ಥಂದ ಗೀತ ಮತ್ತು ನಕ್ಷತ್ರ ದಾರಿ ಕವನ ಸಂಕಲನಗಳು ಲೋಕಾರ್ಪಣೆಗೊಳ್ಳಲಿವೆ.

ಹಾನಗಲ್‌ನ ಗಾಯಕ ನರಸಿಂಹ ಕೋಮಾರರಿಂದ ಹಜರೆಸಾಬ ನದಾಫ್‌ರವರ ಕವಿತೆಗಳ ಗೀತ ಗಾಯನ ಜರುಗಲಿದೆ. ನದಾಫ್‌ರ ಸಾಹಿತ್ಯ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಲು ನಿರಂತರ ಪ್ರಕಾಶನದ ಸಂಚಾಲಕಿ ಸಾಯಿರಾ ಬಾನು ಮಕಾನದಾರ ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಅಪಾಯ ತಂದೊಡ್ಡುತ್ತಿರುವ ಚರಂಡಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಾರ್ಡ್ ನಂ.20ರ ಕುಮಾರವ್ಯಾಸ ರಸ್ತೆಯಲ್ಲಿ ಕಳೆದ ಒಂದು ವರ್ಷದ ಕೆಳಗೆ ಕಾಮಗಾರಿ ನೆಪದಲ್ಲಿ ಅಗೆದ ಚರಂಡಿಯನ್ನು ಇನ್ನೊಂದು ವಾರದಲ್ಲಿ ಸರಿಪಡಿಲಾಗವುದು ಎಂದು ಹೇಳಿ ಇದುವರೆಗೂ ಸರಿಪಡಿಸಿಲ್ಲ. ಈ ಚರಂಡಿ ಈಗಾಗಲೇ 5ಕ್ಕೂ ಹೆಚ್ಚು ಬೈಕ ಸಾವವರ ಕೈ-ಕಾಲು ಮುರಿದು, ಗಾಯಗೊಳಿಸಿದೆ. ಬೈಕ್ ಸಾವರರ ಪಾಲಿಗೆ ಮೃತ್ಯು ಕೂಪವಾಗಿ ಪರಿಣಮಿಸ್ಕತ್ತಿದೆಯಲ್ಲದೆ, ಸಮೀಪದಲ್ಲೇ ಶಾಲೆಯೂ ಇರುವ್ಯದರಿಂದ ಇನ್ನಷ್ಟು ಅಪಾಯಕ್ಕೆ ಆಹ್ವಾನ ನೀಡುವಚಿತಿದೆ.

ಜನನಿಬಿಡ ಪ್ರದೇಶ ಹಾಗೂ ಪ್ರಸಿದ್ಧ ವೀರನಾರಾಯಣ ದೇವಸ್ಥಾನ ಮಾರ್ಗ ಮಧ್ಯದಲ್ಲಿರುವ ಈ ಚರಂಡಿಯ ಅವ್ಯವಸ್ಥೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಸಂಬಂಧಪಟ್ಟವರು ಇದನ್ನು ಸರಿಪಡಿಸಬೇಕೆಂದು ವಾರ್ಡಿನ ಸ್ಥಳೀಚುರು ಹಾಗೂ ನಾಗೇಶ್ವರ ಮಿತ್ರ ಮಂಡಳಿ ಸದಸ್ಯರು ಆಗ್ರಹಿಸಿದ್ದಾರೆ.


ಧಾರವಾಡದಲ್ಲಿ ಪಂ. ಪುಟ್ಟರಾಜ ಗುರುವರ್ಯರ ಸಾಹಿತ್ಯ ಸಾಧನೆಯ ಸ್ಮರಣೆ

# ಪಂ. ಪುಟ್ಟರಾಜ ಸಾಹಿತ್ಯೋತ್ಸವ ನಾಳೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪಂ. ಪುಟ್ಟರಾಜ ಗುರುವರ್ಯರ ಸಾಹಿತ್ಯ ಸಾಧನೆಯನ್ನು ಸ್ಮರಿಸಿಕೊಳ್ಳುವ ಉದ್ದೇಶದಿಂದ ಸುಮಾರು 24 ವರ್ಷಗಳಿಂದ ಹಮ್ಮಿಕೊಳ್ಳುತ್ತಿರುವ ಪಂ. ಪುಟ್ಟರಾಜ ಸಾಹಿತ್ಯೋತ್ಸವವನ್ನು 2ನೇ ಬಾರಿ ಧಾರವಾಡದಲ್ಲಿ ಹಮ್ಮಿಕೊಳ್ಳಲಾಗಿದೆ. ಅ. 20ರಂದು ಬೆಳಿಗ್ಗೆ 10 ಗಂಟೆಯಿಂದ ರಾತ್ರಿ 8 ಗಂಟೆವರೆಗೆ ದಾರವಾಡದ ರಂಗಾಯಣದಲ್ಲಿ ಇಡೀ ದಿನ ಕಾರ್ಯಕ್ರಮ ನಡೆಯುವುದು.

ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಮನ್ಸೂರಿನ ರೇವಣಸಿದ್ಧೇಶ್ವರ ಮಠದ ಪೂಜ್ಯಶ್ರೀ ಡಾ. ಬಸವರಾಜ ದೇವರು ವಹಿಸಿಕೊಳ್ಳುವರು. ಡಾ. ಪಂ.ಪುಟ್ಟರಾಜ ಸೇವಾ ಸಮಿತಿಯ ಗ್ವರವಾಧ್ಯಕ್ಷರಾದ ಕೆಂಬಾವಿ ಸಂಸ್ಥಾನ ಹಿರೇಮಠದ ಶ್ರೀ ಷ. ಬ್ರ. ಚನ್ನಬಸವ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿಕೊಳ್ಳುವರು. ಪುಟ್ಟರಾಜ ಗುರುಗಳ ಶಿಷ್ಯರಾದ ಕಡಣಿ ಸಂಸ್ಥಾನ ಹಿರೇಮಠದ ವೇ. ಪೂಜ್ಯಶ್ರೀ ಚನ್ನವೀರಸ್ವಾಮಿಗಳು ಕಾರ್ಯಕ್ರಮ ಉದ್ಘಾಟಿಸುವರು. ಕ.ವಿ.ವಿ ಲಲಿತಕಲಾ ಹಾಗೂ ಸಂಗೀತ ಮಹಾವಿದ್ಯಾಲಯದ ಸಹಾಯಕ ಉಪನ್ಯಾಸಕರು, ಸಾಹಿತಿಗಳಾದ ಡಾ. ಎ.ಎಲ್. ದೇಸಾಯಿ ದಾರವಾಡ ನುಡಿ ನಮನ ಸಲ್ಲಿಸಲಿದ್ದಾರೆ. ಅತಿಥಿಗಳಾಗಿ ಪಂ. ಬಸವರಾಜ ಹೆಡಿಗ್ಗೊಂಡ, ರಂಗಾಯಣದ ನೂತನ ನಿರ್ದೇಶಕ ರಾಜು ತಾಳಿಕೋಟಿ, ಪತ್ರಿಕಾ ಸಂಪಾದಕರಾದ ಎಸ್.ಎಸ್. ಪಾಟೀಲ್, ಅಂದಾನೆಪ್ಪ ವಿಭೂತಿ ಆಗಮಿಸಲಿದ್ದಾರೆ.



ಈ ಬಾರಿಯ ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ ರಾಜ್ಯ ಪ್ರಶಸ್ತಿಗೆ 'ಕರ್ನಾಟಕದ ಸಾಧನೆ ಸಂಪನ್ನರು' ಕೃತಿ ಆಯ್ಕೆಯಾಗಿದ್ದು, ಕರ್ತ ಎಚ್.ಎಸ್. ಸಿದ್ಧಗಂಗಪ್ಪ ಇವರಿಗೆ ಪ್ರಶಸ್ತಿ ಪ್ರದಾನಿಸಲಾಗುವುದು. ಇದೇ ಸಂದರ್ಭದಲ್ಲಿ ಛಾತ್ರಂಬದ ಪೂಜ್ಯ ಜಗದ್ಗುರು ಶಿವಯೋಗೀಶ್ವರ ಮಹಾಸ್ವಾಮಿಗಳ ಆತ್ಮಾನುಭವದ ಬುತ್ತಿ (ಆಧುನಿಕ ವಚನ ಸಂಕಲನ), ಬೆಳಗಾವಿಯ ಡಾ. ಪಿ. ನಾಗರಾಜ, ಶಿವಪುತ್ರ ಕಂಠಿ, ಡಾ. ಅಂಬುಜಾ ಎನ್. ಮಳಖೇಡಕರ, ಸುರೇಶ ಅರಳಿಮರ, ಪದ್ಮಜಾ ಜಯತೀರ್ಥ ಉಮರ್ಜಿ, ಡಾ. ಈರಣ್ಣ ಇಂಜಗನೇರಿ, ಯಲ್ಲಪ್ಪ ಮ.ಹರ್ನಾಳಗಿ, ಸರಸ್ವತಿ ರಾ.ಬೋಸಲೆ, ಧಾರವಾಡದ ಡಾ. ವೀಣಾ ಸಂಕನಗೌಡರ ಇವರ ಕೃತಿಗಳಿಗೆ, ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ 'ವರ್ಷದ ಶೇಷ್ಠ ಕೃತಿ ರತ್ನ ಪ್ರಶಸ್ತಿ' ನೀಡಿ ಗೌರವಿಸಲಾಗುವುದು.

ತರುವಾಯ, ಎಂ.ಪಿ.ಎಂ. ಕೊಟ್ರಯ್ಯ ಇವರ ಅಧ್ಯಕ್ಷತೆಯಲ್ಲಿ ಕವಿಗೋಷ್ಠಿ ಏರ್ಪಡಿಸಲಾಗಿದೆ, ಜಯಶ್ರೀ ಬೆರಗುಡ ಹಳಿಯಾಳ, ಕಸ್ತೂರಿ ಗಂಜಿಗಟ್ಟಿ, ಪ್ರೊ. ಪ್ರವೀಣ್ ಕುಲಕರ್ಣಿ ಜಮಖಂಡಿ, ವನಶ್ರೀ ಶಿಂಧೆ, ಶಿವರಾಜ ಅರಳಿ, ಜಯಶ್ರೀ ಹಿರೇಮಠ, ಬಸವರಾಜ ಹಡಪದ, ಶಾಂತಾ ಹರಪನಹಳ್ಳಿ, ಡಾ. ಅಂಬುಜಾ ಎನ್.ಮಳಖೇಡಕರ, ಬಸವಂತಿ ಇಂಗಳಳ್ಳಿ ಇವರುಗಳು ತಮ್ಮ ಕವನ ವಾಚನ ಮಾಡಲಿದ್ದಾರೆ. ಎಫ್.ಎ. ಹಿರೇಮಠ (ಬೆಳ್ಳಟ್ಟಿ), ದೇವು ಹಡಪದ, 'ವಿದುಷಿ' ದೇವಿಕಾ ಜೋಗಿ, ಸೌಮ್ಯ ಸುರೇಶ ಧಾರವಾಡ ಇವರುಗಳು ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ತೀರ್ಪುಗಾರರ ಮೆಚ್ಚಿನ ಅಭಿನಂದನಾ ಪ್ರಶಸ್ತಿಗೆ ಭಾಜನರಾದ ಮಹಾಂತೇಶ ಕುಂಬಾರ (ಎಮ್ಮಾರ್ಕೆ) ಎ.ಆರ್. ಪಂಪಣ್ಣ, ರೂಪಾದೇವಿ ಬಂಗಾರ, ಮಾಲತೇಶ ಅಂಗೂರ, ರಂಜಿತಾ ಮಹಾಜನ, ವಿನುತ ಹಂಚಿನಮನಿ ಇವರುಗಳನ್ನು ಅಭಿನಂದಿಸಲಾಗುವುದು.

ವಿದುಷಿ ರೋಹಿಣಿ ಇಮಾರತಿ, ವಿದುಷಿ ಡಾ. ಸುಮಾ ಹಡಪದ, ವಿದುಷಿ ವಿಜಯಲಕ್ಷ್ಮಿ ಬಸಯ್ಯ ಬನ್ನಿಗೋಳಮಠ ಇವರಿಗೆ 'ಸಂಗೀತ ನೃತ್ಯ ಸೇವಾ ಶ್ರೀ' ಗೌರವ ಸಲ್ಲಿಸಲಾಗುವುದು.

> ಸಂಜೆ 4 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದ್ದು, ದಿವ್ಯ ಸಾನ್ನಿಧ್ಯವನ್ನು ಪೂಜ್ಯ ಶ್ರೀ ಜಗದ್ಗುರು ಶಿವಯೋಗೀಶ್ವರ ಮಹಾಸ್ವಾಮಿಗಳು ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಪೂಜ್ಯ ಶ್ರೀ ಶಿವಪಂಚಾಕ್ಷರಿ ಸ್ವಾಮೀಜಿ ವಹಿಸಿಕೊಳ್ಳುವರು. ಸಂಗಮೇಶ ಬಬಲೇಶ್ವರ, ಶಂಕರ ಹಲಗ್ವತ್ತಿ, ಮಲ್ಲಿಕಾರ್ಜುನ ಎಂ.ಚಿಕ್ಕಮಠ, ಸಿದ್ಧಲಿಂಗೇಶ ಉ.ಸಜ್ಜನಶೆಟ್ಟರ, ಡಾ. ವಿನಾಯಕ ರಾ.ಕಮತದ ಅತಿಥಿಗಳಾಗಿ ಆಮಿಸಲಿದ್ದಾರೆ.

ಪ್ರೇಮಾ ಕಡೆಮನಿ, ವಿದುಷಿ ಸೀತಾ ಡಿ.ಛಪ್ಪರ, ವಿದುಷಿ ರೋಹಿಣಿ ಇಮಾರತಿ, ಡಾ. ಸುಮಾ ಹಡಪದ, ಭವ್ಯ ಎಸ್.ಕತ್ತಿ. ಮಂಜುಳಾ ಪಟಗುಡಿ, ವಿದುಷಿ ವಿಜಯಲಕ್ಷ್ಮಿ ಬಸಯ್ಯ ಬನ್ನಿಗೋಳಮಠ, ವಿಶಾರದ ಬಸವರಾಜ ಮುಳಗುಂದ, ಬಸವರಾಜ ಮುಂಡರಗಿ, ಎನ್.ಎಸ್. ಡಂಬಳ, ಅರ್ಚನಾ ಹಿರೇಮಠ ಇವರುಗಳಿಂದ ಸಂಗೀತ, ನೃತ್ಯ ಕಾರ್ಯಕ್ರಮಗಳು ನಡೆಯುವವು ಎಂದು ಸಾಹಿತ್ಯೋತ್ಸವದ ಉಸ್ತುವಾರಿ, ಶಿಕ್ಷಕ, ಸಂಘಟಕ ಬಸವರಾಜ ಹಡಪದ ಮತ್ತು ಸೇವಾ ಸಮಿತಿಯ ಡಾ. ಸುರೇಶ ಕಳಸಣ್ಣವರ ಜಂಟಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

**ಪತ್ರಿಕಾಗೋಷ್ಠಿಯಲ್ಲಿ ಸಾಹಿತಿ ಬಸವರಾಜ ಸೂಳಿಭಾವಿ ಎಚ್ಚರಿಕೆ**

# ಕಪ್ಪತಗುಡ್ಡಕ್ಕಾಗಿ ಹೋರಾಟಕ್ಕೂ ಸಿದ್ಧ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಜನರ ಜೀವನಾಡಿ, ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಕಪ್ಪತಗುಡ್ಡ ಹೆಸರುವಾಸಿಯಾಗಿದೆ. ಬಯಲುಸಿಮೆಯ ನಾಡಿನ ಜೀವಾಳ ಕಪ್ಪತ್ತಗುಡ್ಡವಾಗಿದ್ದು, ಅದು ಕೇವಲ ಸಸ್ಯಕಾಶಿ ಅಷ್ಟೇ ಅಲ್ಲ. ಈ ಭಾಗದಲ್ಲಿ ಸುರಿಯುವ ಮಳೆಯಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಿದೆ. ಈ ಕಪ್ಪತಗುಡ್ಡಕ್ಕೆ ದೊಡ್ಡ-ದೊಡ್ಡ ಕಂಪನಿಗಳ ದುಷ್ಟ ಕಣ್ಣು ಬಿದ್ದಿತ್ತು. ಜೊತೆಗೆ ವಿದೇಶದ ಕಂಪನಿ ಕೂಡ ಈ ನೆಲಕ್ಕೆ ಬರಲು ತುದಿಗಾಲಲ್ಲಿ ನಿಂತಿತ್ತು. ಆಗ ದೊಡ್ಡ ಹೋರಾಟದ ಫಲವಾಗಿ ಕಪ್ಪತ್ತಗುಡ್ಡವನ್ನು ಉಳಿಸಲಾಗಿತ್ತು. ಈಗ ಮತ್ತೆ ಗಣಿಗಾರಿಕೆಗೆ ಸರ್ಕಾರದಿಂದ ಅನುಮತಿ ನೀಡುವ ಸಾಧ್ಯತೆ ಇದ್ದು, ಅನುಮತಿ ನೀಡಿದರೆ ಹೋರಾಟ ಮಾಡಲಾಗುವುದು ಎಂದು ಸಾಹಿತಿ ಬಸವರಾಜ ಸೂಳಿಭಾವಿ ಎಚ್ಚರಿಕೆ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಹಿಂದೆ ಹಲವು ಕಂಪನಿಗಳು ಗಣಿಗಾರಿಕೆ ಮಾಡಲು ಸಂಚು ರೂಪಿಸಿದ್ದನ್ನು ನಾವು ಮರೆಯಬಾರದು. 2017ರಲ್ಲಿ ಸರ್ಕಾರ ಕಪ್ಪತ್ತಗುಡ್ಡವನ್ನು ಸಂರಕ್ಷಿತ ಅರಣ್ಯ ಪ್ರದೇಶವೆಂದು ಘೋಷಣೆ ಮಾಡಿದೆ. ಕಪ್ಪತಗುಡ್ಡದ 1 ಕಿ. ಮಿ. ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆ ಮಾಡಬಾರದು ಎಂದು ನಿಷೇಧ ಮಾಡಿತ್ತು. ನಂತರ ಹಲವು ಕಂಪನಿಗಳು ಹೈಕೋರ್ಟ್ ಮೊರೆ ಹೋದಾಗ ಹೈಕೋರ್ಟ್ ಸರ್ಕಾರದ ಆದೇಶ ಎತ್ತಿ ಹಿಡಿದು ನ್ಯಾಯ ಒದಗಿಸಿಕೊಟ್ಟಿದೆ. ಅಂದು ಕಪ್ಪತ್ತಗುಡ್ಡ ಉಳಿಸುವ ಹೋರಾಟದಲ್ಲಿ ಸಿದ್ದರಾಮಯ್ಯನವರು ಆಗಮಿಸಿ ಬೆಂಬಲಿಸಿದ್ದರು. ಆದರೆ, ಈಗ ಸಿಎಂ ಸ್ಥಾನದಲ್ಲಿರುವ ಸಿದ್ದರಾಮಯ್ಯ ಇದಕ್ಕೆ ಅನುಮತಿ ನೀಡಲು ಹೊರಟಿರುವುದು ಸರಿಯಾದ ಕ್ರಮ ಅಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಏಶಿಯಾ ಖಂಡದಲ್ಲೇ ಅತ್ಯುತ್ತಮ ಹವಾಮಾನ ಇರುವ ಪ್ರದೇಶ ಎನ್ನುವ ಕೀರ್ತಿ ಕಪ್ಪತಗುಡ್ಡಕ್ಕೆ ಇದೆ. ಅಲ್ಲಿನ ವಾತಾವರಣದಿಂದ ಗದಗ ಜಿಲ್ಲೆಯಲ್ಲಿ ಉತ್ತಮ ಗಾಳಿ ಬೀಸುತ್ತಿದೆ. ಇಂತಹ ವಾತಾವರಣದಲ್ಲಿ ಗಣಿಗಾರಿಕೆ ನಡೆದರೆ ಕಲುಷಿತ ವಾತಾವರಣ ನಿರ್ಮಾಣವಾಗಿ, ಸಾರ್ವಜನಿಕರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಸೋಮವಾರ ವನ್ಯಜೀವಿಗಳ ಮಂಡಳಿಯ ಸಭೆ ನಡೆಯಲಿದೆ. ಆ ಸಭೆಯಲ್ಲಿ ಕಪ್ಪತ್ತಗುಡ್ಡದ ಗಣಿಗಾರಿಕೆ ಪ್ರಸ್ತಾವವನ್ನು ಸಿಎಂ ಸಿದ್ದರಾಮಯ್ಯ ತಿರಸ್ಕರಿಸಬೇಕು. ಸರ್ಕಾರ ಗಣಿಗಾರಿಕೆಗೆ ಅನುಮತಿ ನೀಡಿದರೆ ನಾವು ದೊಡ್ಡ ಚಳುವಳಿ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲರು ಕೂಡ ಗಣಿಗಾರಿಕೆ ಪ್ರಸ್ತಾಪವನ್ನು ತಿರಸ್ಕರಿಸುವಂತೆ ಸಿಎಂ ಮೇಲೆ ಒತ್ತಡ ಹೇರಬೇಕು. ರಾಜಕಾರಣದ ಪ್ರಭಾವದಿಂದ ವನ್ಯಜೀವಿ ಮಂಡಳಿ ಸದಸ್ಯರು ಅನುಮತಿ ನೀಡಲು ಹೊರಟಿದ್ದಾರೆ. ಸಿದ್ದರಾಮಯ್ಯ ಇದನ್ನು ಅರಿತುಕೊಂಡು 28 ಅಂಶಗಳ ಪ್ರಸ್ತಾವವನ್ನು ತಿರಸ್ಕರಿಸಬೇಕು ಎಂದು ಸಾಹಿತಿ ಬಸವರಾಜ ಸೂಳಿಭಾವಿ ವಿನಂತಿಸಿದರು.

ಗಣಿಗಾರಿಕೆ ಲಾಬಿಗೆ ಸರ್ಕಾರ ಮಣಿಯಬಾರದು. ಅಪರೂಪದ ಔಷಧೀಯ ಸಸ್ಯ ಪ್ರಭೇದ ಕಪ್ಪತಗುಡ್ಡದಲ್ಲಿ ಇರುವುದು ಹಲವು ಸಂಶೋಧನೆಗಳಿಂದ ಬಹಿರಂಗವಾಗಿದೆ. ಶುದ್ಧ ಗಾಳಿ ಸದಾ ಉಳಿಯಬೇಕು ಎನ್ನುವುದಾದರೆ ಕಪ್ಪತ್ತಗುಡ್ಡ ಉಳಿಸುವ ಅವಶ್ಯಕತೆ ಇದ್ದು, ಸಿಎಂ ಸಿದ್ದರಾಮಯ್ಯ ಗಣಿಗಾರಿಕೆ ಪ್ರಸ್ತಾಪವನ್ನು ಸಾರಾಸಗಟಾಗಿ ತಿರಸ್ಕರಿಸಬೇಕು ಎಂದರು.

ಈ ಸಂದರ್ಭದಲ್ಲಿ ಜೆ.ಬಿ. ಪಾಟೀಲ್, ಬಾಲರಾಜ ಅರಬರ, ಶೇಖಣ್ಣ ಕವಳಿಕಾಯಿ, ಶರೀಫ ಬಿಳೆಯಲಿ, ಕಾಶಿನಾಥ ಬಗಲಿ, ಅನಿಲ ಕಾಳೆ, ಪರಶು ಕಾಳೆ, ಬಸವರಾಜ ಬಿಳೆಯಲಿ ಸೇರಿದಂತೆ ಹಲವು ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.




> ಹಲವಾರು ವರ್ಷಗಳಿಂದ ಕಪ್ಪತಗುಡ್ಡ ಉಳಿವಿಗಾಗಿ ಹೋರಾಟ ಮಾಡಿದ್ದೇವೆ. ಇದರ ಪರಿಣಾಮವಾಗಿ ಕಪ್ಪತಗುಡ್ಡವನ್ನು ವನ್ಯಜೀವಿ ಸಂರಕ್ಷಿತ ಸ್ಥಳ ಎಂದು ಘೋಷಣೆ ಮಾಡಲಾಯಿತು. ಅತ್ಯಮೂಲ್ಯ ಔಷಧೀಯ ಸಸ್ಯಗಳು ಕಪ್ಪತಗುಡ್ಡದಲ್ಲಿದೆ. ಅದರ ಉಳಿವಿಗಾಗಿ ನಿರಂತರ ಹೋರಾಟ ಮಾಡಲು ನಾವು ಸಿದ್ಧರಿದ್ದೇವೆ. ಮೊದಲು ಕಪ್ಪತಗುಡ್ಡದಿಂದ 10 ಕಿ.ಮಿ ವ್ಯಾಪ್ತಿಯಲ್ಲಿ ಗಣಿಗಾರಿಕೆ ಮಾಡಬಾರದು ಎಂದಿತ್ತು. ಆದರೆ, ಈಗ ಕೇವಲ 1 ಕಿ.ಮಿ ವ್ಯಾಪ್ತಿಗೆ ತರಲಾಗಿದೆ. ಮುಂದುವರಿದ ಭಾಗವಾಗಿ ಆ 1 ಕಿ.ಮಿ ವ್ಯಾಪ್ತಿಯನ್ನು ತೆಗೆದುಹಾಕಿ ಕಪ್ಪತಗುಡ್ಡ ಕಬಳಿಸುವ ಹುನ್ನಾರ ನಡೆದಿದೆ.
>
> **- ಚಂದ್ರಕಾಂತ್ ಚೌವ್ಹಾಣ್.**
> ಕನ್ನಡಪರ ಹೋರಾಟಗಾರರು.

# ಚುರುಕು ಪಡೆದ ಹಿಂಗಾರಿ ಬಿತ್ತನೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ಹೋಬಳಿಯಲ್ಲಿ ಹಿಂಗಾರು ಬಿತ್ತನೆ ಜೋರಾಗಿ ನಡೆದಿದೆ. ಇದಕ್ಕೆ ಕಾರಣ ಈ ಹೋಬಳಿಯಲ್ಲಿ ಉತ್ತಮ ಮಳೆಯಾಗುತ್ತಿರುವುದು. ಈ ಹಿಂಗಾರಿನಲ್ಲಿ ರೈತರು ಮುಖ್ಯವಾಗಿ ಕಡಲೆ, ಜೋಳ, ಗೋಧಿ ಮತ್ತು ಕುಸುಬಿಗಳನ್ನು ಬೆಳೆಯುತ್ತಿದ್ದಾರೆ ಎಂದು ರೈತ ಸಂಪರ್ಕ ಕೇಂದ್ರದ ಅಧಿಕಾರಿ ಬಸವರಾಜ ಗದಗಿನ ಮಾಹಿತಿ ನೀಡಿದ್ದಾರೆ.



ನರೇಗಲ್ಲ ರೈತ ಸಂಪರ್ಕ ಕೇಂದ್ರದಲ್ಲಿ ರೈತರಿಗೆ ಸರಬರಾಜು ಮಾಡಲು ಒಟ್ಟು 4475 ಕ್ವಿಂಟಲ್ ಕಡಲೆ ಬೀಜ ಬಂದಿತ್ತು. ಅದರಲ್ಲಿ ಈಗಾಗಲೇ 3376 ಕ್ವಿಂಟಲ್ ಮಾರಾಟವಾಗಿದೆ. ಜೋಳ 80.40 ಕ್ವಿಂಟಲ್ ಸರಬರಾಜಾಗಿದ್ದು, ಅದರಲ್ಲಿ 16.83 ಕ್ವಿಂಟಲ್ ಮಾರಾಟವಾಗಿದೆ. ಗೋಧಿ 40 ಕ್ವಿಂಟಲ್ ಬಂದಿದ್ದು, 5 ಕ್ವಿಂಟಲ್ ಮಾರಾಟವಾಗಿದೆ. ಕುಸುಬಿ 3 ಕ್ವಿಂಟಲ್ ಸರಬರಾಜು ಆಗಿದ್ದು ಎಲ್ಲವೂ ಮಾರಾಟವಾಗಿದೆ ಎಂದು ತಿಳಿಸಿದರು.

ಈಗ ಕೇಂದ್ರದಲ್ಲಿ 1099 ಕ್ವಿಂಟಲ್ ಕಡಲೆ ಬೀಜ, 63.57 ಕ್ವಿಂಟಲ್ ಜೋಳ, 35 ಕ್ವಿಂಟಲ್ ಗೋಧಿ ದಾಸ್ತಾನು ಇದೆ. ಹಿಂಗಾರು ಬಿತ್ತನೆ ಇನ್ನೂ ಮುಕ್ತಾಯ ಕಂಡಿಲ್ಲವಾದ್ದರಿಂದ ಇನ್ನೂ ಅನೇಕ ರೈತರು ಬರುವ ನಿರೀಕ್ಷೆಯಿದ್ದು, ಬಹುತೇಕ ಎಲ್ಲ ಬೀಜಗಳೂ ಮಾರಾಟವಾಗುವ ಭರವಸೆ ಇದೆ ಎಂದು ಬಸವರಾಜ ಹೇಳಿದರು.

ನರೇಗಲ್ಲ ದೊಡ್ಡ ಹೋಬಳಿಯಾಗಿದ್ದು, ಬಿತ್ತನೆ ಬೀಜಗಳನ್ನು ಇಲ್ಲಿ ಮಾತ್ರವಲ್ಲದೆ ಇನ್ನೂ ಹತ್ತು ಕಡೆಗಳಲ್ಲಿ ಮಾರಾಟ ಮಾಡಲು ಅನುಕೂಲ ಮಾಡಲಾಗಿದೆ. ಇದರಿಂದ ರೈತರಿಗೆ ವ್ಯರ್ಥ ಓಡಾಟ, ಸಾರಿಗೆ ಮತ್ತು ಸಮಯದ ಉಳಿತಾಯವಾಗಲೆಂದು ಅಬ್ಬಿಗೇರಿ, ನಿಡಗುಂದಿ, ಹಾಲಕೆರೆ, ಮಾರನಬಸರಿ, ಜಕ್ಕಲಿ, ಇಟಗಿ, ಡ.ಸ.ಹಡಗಲಿ, ಕುರಡಗಿ, ಸೂಡಿ ಗ್ರಾಮಗಳ ಎಲ್ಲ ಸೊಸೈಟಿಗಳಲ್ಲಿ ಮತ್ತು ನರೇಗಲ್ಲ ರೈತ ಸಂಪರ್ಕ ಕೇಂದ್ರದಲ್ಲಿ ಬಿತ್ತನೆ ಬೀಜಗಳ ವಿತರಣೆ ಮಾಡಲು ವ್ಯವಸ್ಥೆ ಮಾಡಲಾಗಿದೆ.

ಬಿತ್ತನೆ ಬೀಜ ಯಾರಿಗಾದರೂ ಕಡಿಮೆ ಬಿದ್ದರೆ ಇಲ್ಲಿಂದಲೇ ಸರಬರಾಜು ಮಾಡಲಾಗುವದೆಂದು ತಿಳಿಸಿದರು.

**ಯತಿ ನರಸಿಂಗಾನಂದ ಸ್ವಾಮಿ ವಿರುದ್ಧ ಮುಸ್ಲಿಂ ಸಮುದಾಯ ಆಕ್ರೋಶ**

# ಪ್ರವಾದಿಯವರ ಬಗ್ಗೆ ನಿಂದನೆ ಖಂಡಿಸಿ ಬೃಹತ್ ಪ್ರತಿಭಟನೆ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಪ್ರವಾದಿ ಪೈಗಂಬರ ಹಜರತ್ ಮೊಹಮ್ಮದ್ (ಸ) ರವರ ಕುರಿತು ಅವಹೇಳನಕಾರಿಯಾಗಿ ಮಾತನಾಡಿ ಅವರ ಬಗ್ಗೆ ನಿಂದನೆ ಮಾಡಿದ ಯತಿ ನರಸಿಂಗಾನಂದ ಸ್ವಾಮಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿ ಮುಸ್ಲಿಂ ಸಮಾಜದವರು ಶುಕ್ರವಾರ ಪ್ರತಿಭಟನೆ ನಡೆಸಿದರು.

ನಗರದ ಗಡಿಯಾರ ಕಂಬದಿಂದ ಜವಾಹರ್ ರಸ್ತೆ ಮಾರ್ಗ ಸಂಚರಿಸಿ ಅಶೋಕ್ ಸರ್ಕಲ್ ವರೆಗೆ ಬೃಹತ್ ಪ್ರತಿಭಟನೆ ನಡೆಸಿದರು.

ಪ್ರವಾದಿಯವರ ಕುರಿತು ಅವಹೇಳನಕಾರಿಯಾಗಿ ಮಾತನಾಡಿದ ನರಸಿಂಗಾನಂದ ಸ್ವಾಮಿ ಯವರ ಹೇಳಿಕೆ ಖಂಡಿಸಿ ಕೂಡಲೇ ಪ್ರಕರಣ ದಾಖಲಿಸಿ ಸೂಕ್ತ ಕಾನೂನು ರೀತಿಯ ಕ್ರಮ ಜರುಗಿಸುವಂತೆ ಮತ್ತು ಕಠಿಣ ಶಿಕ್ಷೆಗೆ ಒಳಪಡಿಸುವಂತೆ ಒತ್ತಾಯಿಸಿದರು.

ಈ ಪ್ರತಿಭಟನೆಯಲ್ಲಿ ಮುಸ್ಲಿಂ ಧರ್ಮ ಗುರುಗಳು, ಮುಫ್ತಿ ಗಳು ಮೌಲಾನಗಳು ಸಮಾಜದ ಮುಖಂಡರು ಸೇರಿದಂತೆ ಜನಪ್ರತಿನಿಧಿಗಳು ಸಮಾಜದ ವಿವಿಧ ಸಂಘಟನೆಯವರು ಪಾಲ್ಗೊಂಡಿದ್ದರು.

# ಬೆಳೆ ಹಾನಿ ಪರಿಹಾರ ನೀಡಲು ಮನವಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನಲ್ಲಿ ಕಳೆದ 10-12 ದಿನಗಳಿಂದ ಸತತವಾಗಿ ಸುರಿಯುತ್ತಿರುವ ಮಳೆಯಿಂದ ಬೆಳೆದು ನಿಂತಿದ್ದ ಫಸಲು ಸಂಪೂರ್ಣ ಹಾಳಾಗಿವೆ. ಹೀಗಾಗಿ, ರೈತರು ತುಂಬಿರುವ ಬೆಳೆ ವಿಮೆ ಪರಿಹಾರ ನೀಡಬೇಕು ಎಂದು ಕೃಷಿಕ ಸಮಾಜ ಮತ್ತು ಭಾರತೀಯ ಕಿಸಾನ್ ಸಂಘದಿಂದ ಶುಕ್ರವಾರ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಕೃಷಿಕ ಸಮಾಜದ ತಾಲೂಕಾಧ್ಯಕ್ಷ ಚೆನ್ನಪ್ಪ ಷಣ್ಮುಖಿ ಮಾತನಾಡಿ, ಮುಂಗಾರು ಪ್ರಮುಖ ಬೆಳೆಯಾಗಿರುವ ಗೋವಿನಜೋಳ, ಹತ್ತಿ, ಶೇಂಗಾ, ಈರುಳ್ಳಿ, ಮೆಣಸಿನಕಾಯಿ ಸೇರಿದಂತೆ ಅನೇಕ ಬೆಳೆಗಳು ಕಟಾವಿನ ಹಂತಕ್ಕೆ ಬಂದಿತ್ತು. ಆದರೆ ಮಳೆಯಿಂದ ಸಂಪೂರ್ಣ ಹಾಳಾಗಿದ್ದು, ಅವುಗಳ ಮೇಲೆ ಬೆಳೆ ವಿಮೆ ಕಟ್ಟಿದ್ದೇವೆ. ಬೆಳೆ ವಿಮೆ ಕಂಪನಿಯಿಂದ ಪರಿಹಾರವನ್ನು ಬೇಗನೆ ದೊರಕಿಸಿಕೊಡಬೇಕು ಹಾಗೂ ಸರ್ಕಾರದಿಂದ ರೈತರಿಗೆ ಸೂಕ್ತ ಪರಿಹಾರ ನೀಡಬೇಕು. ಅಲ್ಲದೆ ಹಿಂಗಾರು ಬೆಳೆಗಳಾದ ಕಡಲೆ, ಜೋಳ, ಗೋಧಿ ಈಗಾಗಲೇ ಬಿತ್ತನೆ ಮಾಡಿದ್ದು, ಅದು ಸಹ ಭೂಮಿಯಲ್ಲಿಯೇ ಕೊಳೆತು ಹೋಗಿದೆ.

ಕೂಡಲೇ ಸಂಬಂಧಪಟ್ಟವರು ಪರಿಹಾರ ಒದಗಿಸಲು ಮುಂದಾಗಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹನಮಂತಪ್ಪ ಚಿಂಚಲಿ, ಟಾಕಪ್ಪ ಸಾತಪುತೆ, ಲಕ್ಷ್ಮಣ ಲಮಾಣಿ, ನಮರೆಡ್ಡಿ ಹೊಂಬಳ, ಶಿವಪುತ್ರಪ್ಪ ತಾರಿಕೊಪ್ಪ, ಸಂತೋಷ ಹೊಂಬಳ, ಶ್ರೀನಿವಾಸ ಯರಗುಪ್ಪಿ, ವೆಂಕನಗೌಡ ಪಾಟೀಲ, ವೀರಪ್ಪ ನಾಯ್ಕರ, ಲಕ್ಷ್ಮಣ ಚಿಂಚಲಿ, ಮಂಜುನಾಥ ಕೋಟಗಿ, ಅಶೋಕ ಕುರಿ, ಫಕ್ಕಿರೇಶ ಜಂತ್ಲಿ, ಚನ್ನಬಸಪ್ಪ ಲಗಳಿ ಮುಂತಾದವರು ಇದ್ದರು.

## ಲಕ್ಷ್ಮೇಶ್ವರದಲ್ಲಿ ಪ್ರತಿಬಂಧಕಾಜ್ಞೆ: ಪೊಲೀಸರ ಸರ್ಪಗಾವಲು

▶▶ ಮೊದಲನೇ ಪುಟದಿಂದ

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಯಾವುದೇ ಸಭೆ-ಸಮಾರಂಭ, ಮೆರವಣಿಗೆ ಮಾಡುವನ್ನು, ಐದಕ್ಕಿಂತ ಹೆಚ್ಚು ಜನರು ಸೇರುವದನ್ನು, ಮಾರಕಾಸ್ತ್ರ ಬಳಸವುವುದನ್ನು ಮತ್ತು ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವ ಯಾವುದೇ ಕೃತ್ಯಗಳಲ್ಲಿ ತೊಡಗುವದನ್ನು ನಿಷೇಧಿಸಿದೆ. ಮುಂಜಾಗೃತಾ ಕ್ರಮವಾಗಿ ಶುಕ್ರವಾರ ಪಟ್ಟಣದಲ್ಲಿ ಪೊಲೀಸ್ ಪಡೆಯಿಂದ ಜಾಗೃತಿ ಜಾಥಾ ಮಾಡಲಾಗಿದ್ದು, ಹೆಚ್ಚಿನ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿದೆ. ವ್ಯಾಪಾರ-ವಹಿವಾಟು, ಶಾಲಾ-ಕಾಲೇಜು, ಸಾರಿಗೆ ಸಂಚಾರ ಎಲ್ಲವೂ ಎಂದಿನಂತೆ ನಡೆಯುತ್ತವೆ. ಸಾರ್ವಜನಿಕರು ನಿರ್ಭೀತಿಯಿಂದ ನಿತ್ಯದ ಕಾರ್ಯ ಚಟುವಟಿಕೆ ಮಾಡಬಹುದು ಎಂದರು.

ಈ ವೇಳೆ ತಹಸೀಲ್ದಾರ ವಾಸುದೇವ ಎಂ.ಸ್ವಾಮಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ತನಿಖಾಧಿಕಾರಿ ಮಹಾಂತೇಶ ಸಜ್ಜನ ಇದ್ದರು.



ಲಕ್ಷ್ಮೇಶ್ವರ ಪಟ್ಟಣದಲ್ಲಿ ಅ.12ರಂದು ಎರಡು ಕೋಮಿನ ಯುವಕರ ನಡುವೆ ನಡೆದ ಜಗಳವನ್ನೇ ಮುಂದಿಟ್ಟುಕೊಂಡು ಸಮಾಜದಲ್ಲಿ ಶಾಂತಿ ಕದಡುವ ಉದ್ದೇಶದಿಂದ ಶನಿವಾರ ಶ್ರೀರಾಮಸೇನೆ ಕರೆದಿರುವ ಬಂದ್‌ಗೆ ಅವಕಾಶ ಕೊಡಬಾರದು. ದುರುದ್ದೇಶದ ಬಂದ್‌ನ ನೇತೃತ್ವವಹಿಸಲಿರುವ ಶ್ರೀರಾಮಸೇನೆ ಮುಖಂಡ ರಾಜು ಖಾನಪ್ಪನವರನ್ನು ಬಂಧಿಸಬೇಕು. ಇಲ್ಲದಿದ್ದರೆ ಪ್ರತಿಯಾಗಿ ಪ್ರಗತಿಪರ ಸಂಘಟನೆಗಳೊಡಗೂಡಿ ಪ್ರತಿಭಟನೆ ಕೈಗೊಳ್ಳುವುದಾಗಿ ಸಂಘಟನೆಗಳ ಪ್ರಮುಖರಾದ ಸುರೇಶ ನಂದೆಣ್ಣವರ, ಕೋಟೆಪ್ಪ ವರ್ದಿ, ಸೋಮಣ್ಣ ಬೆಟಗೇರಿ, ಪದ್ಮರಾಜ ಪಾಟೀಲ, ಶರಣು ಅಂಗಡಿ, ನೀಲಪ್ಪ ಪಡಗೇರಿ, ನಾಗೇಶ ಅಮರಾಪುರ ಹಲವರು ಶುಕ್ರವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಅವರಿಗೆ ಮನವಿ ಸಲ್ಲಿಸಿದರು.

# ಸಮಸ್ಯೆ ಪರಿಹಾರವಾಗದಿದ್ದರೆ ಪ್ರತಿಭಟನೆ



**■ವಿಜಯಸಾಕ್ಷಿ ಸುದ್ದಿ, ಗದಗ**

15 ದಿನಗಳ ಒಳಗಾಗಿ ಗದಗ-ಬೆಟಗೇರಿ ನಗರಸಭೆಯಲ್ಲಿ ಟೆಂಡರ್ ಓಪನ್ ಮಾಡಿ ಕಾರ್ಯಾದೇಶ ಇಎಂಡಿ, ಎಸ್.ಡಿ ಹಾಗೂ ಬಿಲ್ ಕೊಡದಿದ್ದರೆ ಕಾಮಗಾರಿ ಬಂದ್ ಮಾಡಿ ಆಯುಕ್ತರ ಚೇಂಬರ್ ಮುಂದೆ ಧರಣಿ ಕೂರುವುದಾಗಿ ಗದಗ-ಬೆಟಗೇರಿ ನಗರಸಭೆ ಸಿವ್ಹಿಲ್ ಗುತ್ತಿಗೆದಾರ ಸಂಘದ ವತಿಯಿಂದ ಗದಗ ಜಿಲ್ಲಾಧಿಕಾರಿಗಳಿಗೆ, ನಗರಸಭೆ ಪೌರಾಯುಕ್ತರಿಗೆ, ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರವನ್ನು ಒತ್ತಾಯಿಸಿದರು.

ಸಂಘದ ಅಧ್ಯಕ್ಷ ಆರ್.ಎಫ್. ಹುಣಸೀಮರದ ಮಾತನಾಡಿ, ಗದಗ-ಬೆಟಗೇರಿ ನಗರಸಭೆ ಗುತ್ತಿಗೆದಾರರಿಗೆ ಪದೇ ಪದೇ ಟೆಂಡರ್ ಕರೆದು ಓಪನ್ ಮಾಡದೆ ತೊಂದರೆ ನೀಡುತ್ತಾ ಬಂದಿದ್ದು, 5-6 ತಿಂಗಳುಗಳಿಂದ 35 ವಾರ್ಡುಗಳಲ್ಲಿ ಕಾಮಗಾರಿಗಳಿಗೆ ಟೆಂಡರ್ ಕರೆದು ಗುತ್ತಿಗೆದಾರರಿಂದ ಇಎಂಡಿ, ಎಸ್.ಡಿ ಬಿಲ್ ವ್ಯತ್ಯಾಸದ ಹಣ ತುಂಬಿಸಿಕೊಂಡು ಟೆಂಡರ್ ಓಪನ್ ಮಾಡದೆ ಗುತ್ತಿಗೆದಾರರಿಗೆ ತೊಂದರೆ ನೀಡಲಾಗುತ್ತಿದೆ.

ಮುಂದಿನ 15 ದಿನಗಳ ಒಳಗಾಗಿ ಸಮಸ್ಯೆ ಬಗೆಹರಿಯದಿದ್ದರೆ ಧರಣಿ ಕುಳಿತುಕೊಳ್ಳುತ್ತೇವೆಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಪದಾಧಿಕಾರಿಗಳಾದ ಎ.ಬಿ. ಕಟಗಿ, ಬಸವರಾಜ ಕಲ್ಮನಿ, ಎಸ್.ಎಚ್. ಹೂಲಿ, ಎ.ಎ. ಮನಿಯಾರ, ವಿ.ಕೆ. ಗುರುಮಠ, ಜಿ.ಎಸ್. ಹಿರೇಮಠ, ಎಂ.ಸಿ. ಶೇಖ, ಬಿ.ಪಿ. ಕಲ್ಮನಿ, ಆರ್.ಎಂ. ತಡಹಾಳ, ಡಿ.ಆರ್. ಗಾಯಕವಾಡ, ಎಲ್.ಎಸ್. ಮುಳಗುಂದ, ಎಮ್.ಎಚ್. ತೋರಗಲ್, ಕೆ.ಎಂ. ಬಳ್ಳಾರಿ, ಬಿ.ಎನ್. ಗುಡಸಾಲಿ, ಪರಶುರಾಮ ಗುಂತಕಲ್, ಎಸ್.ಎಮ್. ಚಳಗೇರಿ, ಎಂ.ಬಿ. ಬೆಳಧಡಿ, ಅಕ್ರಂ ಕಮ್ಮಾರ, ಬಸವರಾಜ ಉಮಚಗಿ, ಸಿದ್ದರಾಮೇಶ್ವರ ಹಿರೇಮಠ, ಶರಣಪ್ಪ ಚಳಗೇರಿ, ಎಲ್.ಬಿ. ದೊಡ್ಡಮನಿ, ಅಮರ ಅಬ್ಬಿಗೇರಿ, ಸರಫರಾಜ ಶೇಖ, ಟಿ.ಎಂ. ಪಾಪಣ್ಣವರ, ಗುತ್ತಿಗೆದಾರರು ಉಪಸ್ಥಿತರಿದ್ದರು.


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಪೇಠಾಲೂರ-582113**

ತಾಲ್ಲೂಕ:ಮುಂಡರಗಿ ಇ-ಮೇಲ್ : mun.alur.gdg@gmail.com ಜಿಲ್ಲೆ:ಗದಗ

ಸಂ.ಗ್ರಾ.ಪಂ.ಪೇ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25/01 ದಿನಾಂಕ: 18/10/2024

**-: ದರಪಟ್ಟಿ ಪ್ರಕಟಣೆ :-**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಪೇಠಾಲೂರ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಪೇಠಾಲೂರ ಗ್ರಾಮದ ಡಿಪಿಇಪಿ ಶಾಲಾ ಆಟದ ಮೈದಾನ ಅಭಿವೃದ್ಧಿಪಡಿಸುವದು | 128223.34 | 500.00 | ಖಾಲಿ ಟೆಂಡರ್ ಫಾರ್ಮ ಅನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2 | ಪೇಠಾಲೂರ ಗ್ರಾಮದ ಡಿಪಿಇಪಿ ಶಾಲೆ ಶೌಚಾಲಯ ದಕ್ಷಿಣದಿಂದ ಪಶ್ಚಿಮದ ಕಡೆಗೆ ರಕ್ಷಣಾಗೋಡೆ ನಿರ್ಮಾಣ | 199505.67 | 500.00 | |
| 3 | ಪೇಠಾಲೂರ ಗ್ರಾಮದ ಉರ್ದು ಶಾಲಾ ರಕ್ಷಣಾಗೋಡೆ ನಿರ್ಮಾಣ | 135136.25 | 500.00 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;- 19/10/2024 ರಿಂದ 25/10/2024 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;- 29-10-2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ:- 30-10-2024 ರ ಮಧ್ಯಾಹ್ನ 3.00ಗಂಟೆಗೆ.

**ನಿಬಂಧನೆಗಳು**

ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಜಂತ್ಲಿ ಶಿರೂರ ದಿಂದ ಮಾಹಿತಿ ಪಡೆಯಬಹುದಾಗಿದೆ.

**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಪೇಠಾಲೂರ — **ಅಧ್ಯಕ್ಷರು** ಗ್ರಾಮ ಪಂಚಾಯತಿ ಪೇಠಾಲೂರ



ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಜಂತ್ಲಿ ಶಿರೂರ - 582113**

ತಾಲ್ಲೂಕ:ಮುಂಡರಗಿ ಇ-ಮೇಲ್ : jshirur.mun.gdg@gmail.com ಜಿಲ್ಲೆ:ಗದಗ

ಸಂ.ಗ್ರಾ.ಪಂ.ಜಂ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25/01 ದಿನಾಂಕ: 18/10/2024

**-: ದರಪಟ್ಟಿ ಪ್ರಕಟಣೆ :-**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಜಂತ್ಲಿ ಶಿರೂರ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಜಂತ್ಲಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಶೌಚಾಲಯ ನಿರ್ಮಾಣ. | 158574.09 | 500.00 | ಖಾಲಿ ಟೆಂಡರ್ ಫಾರ್ಮ ಅನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;- 19/10/2024 ರಿಂದ 25/10/2024 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;- 29-10-2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ:- 30-10-2024 ರ ಮಧ್ಯಾಹ್ನ 3.00ಗಂಟೆಗೆ.

**ನಿಬಂಧನೆಗಳು**

ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಜಂತ್ಲಿ ಶಿರೂರ ದಿಂದ ಮಾಹಿತಿ ಪಡೆಯಬಹುದಾಗಿದೆ.

**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಜಂತ್ಲಿ ಶಿರೂರ — **ಅಧ್ಯಕ್ಷರು** ಗ್ರಾಮ ಪಂಚಾಯತಿ ಜಂತ್ಲಿ ಶಿರೂರ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka